ವಿಜಯಪುರ | ಸಂಪುಟ 02 | ಸಂಚಿಕೆ 204 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಅಕ್ಟೋಬರ್ 08, 2024

"ಮುಡಾ ನಿವೇಶನ ಹಂಚಿಕೆ ಪ್ರಕರಣದಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಜಾತಿಗಣತಿ ವಿಷಯವನ್ನು ಮುನ್ನಲೆಗೆ ತಂದು ನಾಟಕ ಆಡಲಾಗುತ್ತಿದೆ. ಸರ್ಕಾರದ ವಿರುದ್ಧ ಆರೋಪಗಳು ಕೇಳಿ ಬಂದಾಗಲೆಲ್ಲ ಇಂತಹ ತಂತ್ರಗಾರಿಕೆ ಮಾಡುತ್ತಿದ್ದಾರೆ."



■ ಎಚ್.ಡಿ.ಕುಮಾರಸ್ವಾಮಿ
ಕೇಂದ್ರ ಸಚಿವರು

ದಿ.ವಿಜಯ ಸಿಂಧೂರ ರವರಿಗೆ ನಾಡಿನ ಕಲಾವಿದರಿಂದ "ಚಿತ್ರ ನಮನ ಕಲಾಶಿಬಿರ & ಕಲಾಕೃತಿಗಳ ಪ್ರದರ್ಶನ"

## ಕಲಾವಿದರು ನಾಡಿನ ಸಂಪತ್ತು : ಡಾ.ವಿಷ್ಣು ಶಿಂದೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರದ ಕ್ಯಾನವಾಸ್ ಆರ್ಟ್ ಫೌಂಡೇಷನ್ ಹಾಗೂ ಸಿದ್ದಲಿಂಗ ಫೈನ್ ಆರ್ಟ್ ಸೊಸೈಟಿ ಆಯೋಜಿಸಿದ ಇತ್ತೀಚಿಗೆ ನಿಧನರಾದ ಜಮಖಂಡಿಯ ಹೆಸರಾಂತ ಹಿರಿಯ ಕಲಾವಿದರಾಗಿದ್ದ ದಿ.ವಿಜಯ ಸಿಂಧೂರ ರವರಿಗೆ ನಾಡಿನ ಕಲಾವಿದ-ರಿಂದ "ಚಿತ್ರ ನಮನ ಕಲಾಶಿಬಿರ ಹಾಗೂ ದಿ. ಶ್ರೀ ವಿಜಯ ಸಿಂಧೂರ ಅವರ ಮೂಲ ಕಲಾಕೃತಿಗಳ ಪ್ರದರ್ಶನ" ರವಿವಾರ ನಗರದ ಪ್ರವಾಸೋದ್ಯಮ ಇಲಾಖೆಯ ಸರಕಾರಿ ಆರ್ಟಗ್ಯಾಲ-ರಿಯಲ್ಲಿ ನಡೆಯಿತು.

ಕಾರ್ಯಕ್ರಮನ್ನು ಉದ್ಘಾಟಿಸಿ ಮಾತನಾಡಿದ ಮಹಿಳಾ ವಿ.ವಿ. ಪ್ರಾಧ್ಯಾಪಕ ಡಾ.ವಿಷ್ಣು ಎಂ. ಶಿಂದೆ ಅವರು, ಕಲಾವಿದರು ನಾಡಿನ ಸಂಪತ್ತು. ಕಲಾವಿದರು ಹೋದರು ಕಲೆ ಅಜರಾಮರವಾಗಿರುತ್ತದೆ ವಿಜಯ ಸಿಂಧೂರ ಜಮಖಂಡಿಯ ಸಣ್ಣ ಊರಿನಲ್ಲೇ ಇದ್ದು ಇಡಿ ದೇಶದ ಕಲಾಸಕ್ತರ ಗಮನ ಸೆಳೆದವರು. ಜಮಖಂಡಿಯು ವಿಜಯ ಸಿಂಧೂರರ ಮೂಲಕ ದೃಶ್ಯಕಲಾ ಲೋಕದಲ್ಲಿ ತನ್ನ ಛಾಪು ಮೂಡಿಸಿದೆ. ಹಾಗೆ ನಾಡಿನ ಬಹುತೇಕ ಎಲ್ಲ ಪ್ರಶಸ್ತಿ ಗೌರವಗಳಿಗೆ ಭಾಜನರಾದ ಸಿಂಧೂರರವರು ಉತ್ತರ ಕರ್ನಾಟಕದ ಮೊದಲ ರಾಷ್ಟ್ರೀಯ ಪ್ರಶಸ್ತಿ ಪಡೆದ ಚಿತ್ರಕಲಾವಿದರಾಗಿದ್ದರು ಎಂದು ಸ್ಮರಿಸಿದರು.

ವಿಜಯಪುರದ ಹಿರಿಯ ಕಲಾವಿದ ಪಿ.ಎಸ್. ಕಡೇಮನಿ ಅವರು ತಮ್ಮ ಮತ್ತು ಸಿಂಧೂರ ಅವರ ಒಡನಾಟದ ಬಗ್ಗೆ ಮತ್ತು ಅವರ ಕಲಾಕೃತಿಗಳ ಬಗ್ಗೆ ಭಾವಚಿತ್ರ ರಚನೆಯ ತಂತ್ರಗಾರಿಗೆಯ ಅವರ ಕೌಶಲ್ಯದ ಬಗ್ಗೆ ವಿವರವಾಗಿ ಮಾತನಾಡಿದರು.

ಕ್ಯಾನವಾಸ್ ಆರ್ಟ ಫೌಂಡೇಶನ್ ಕಾರ್ಯದರ್ಶಿ ಮತ್ತು ಕಲಾವಿದ ರಮೇಶ ಚವ್ಹಾಣ, ಸಿಂಧೂರ ಮತ್ತು ತಮ್ಮ ಕಲಾ ಬದುಕಿನ ಬಾಂಧವ್ಯ ಕಳೆದ 25 ಕ್ಕೂ ಹೆಚ್ಚು ವರ್ಷಗಳಿಂದ ಇತ್ತು, ನನ್ನ ಕಲಾಕೃತಿಗಳಿಗೆ ಮಾರ್ಗದರ್ಶನ ಮಾಡುತ್ತ ಯುವ ಕಲಾವಿದರು ಬೆಳೆದರೆ ತಮಗೆ ಅತ್ಯಂತ ಖುಷಿಯ ಸಂಗತಿ, ನೀವೆಲ್ಲ ಪ್ರಾಮಾಣಿಕವಾಗಿ ಕಲಾ ಸೇವೆ ಮಾಡಿ ಎಂದು ನಮ್ಮನ್ನು ಹುರುದುಂಬಿಸಿ ತಾವು ಕಲಾಕೃತಿ ರಚಿಸುತ್ತಿದ್ದರು ಎಂದು ತಮ್ಮ ಮನದಾಳದ ಮಾತುಗಳ ಮೂಲಕ ನುಡಿ ನಮನ ಸಲ್ಲಿಸಿದರು.

ಹಿರಿಯ ಕಲಾವಿದ ವಿದ್ಯಾಧರ ಸಾಲಿ ವಿಜಯ ಸಿಂಧೂರ ಅವರ ಕುರಿತು ರಚಿಸಿದ ಕವನ ವಾಚಿಸಿದರು. ಹಲವಾರು ಕಲಾವಿದರು ತಮ್ಮ ಮಾತುಗಳ ಮೂಲಕ ನುಡಿ ನಮನ ಸಲಿಸಿದರು.

ವೇದಿಕೆಯಲ್ಲಿ ಕಲಾ ಪೋಷಕರಾದ ವಿಶ್ವನಾಥ ಬೀಳಗಿ, ಬೆಂಗಳೂ-ರಿನ ಬಾಲಾಜಿ ಫ್ರೇಮ್ ಮಾಲಿಕರಾದ ಪ್ರಶಾಂತ ಹೆಗಡೆ, ಜಮಖಂಡಿಯ ರಾಜು ವಿಜಯ ಸಿಂಧೂರ, ಸೋಮನಾಥ ಸಿಂಧೂರ, ಪಿ.ಎಸ್.ಕಡೇಮನಿ, ಡಾ ವಿಷ್ಣು ಎಂ ಶಿಂದೆ, ರಮೇಶ ಚವ್ಹಾಣ, ಲಿಂಗರಾಜ ಕಾಚಾಪೂರ ಇದ್ದರು.

ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದರಾದ ಎಂ.ಕೆ.ಪತ್ತಾರ. ಎಂ.ಆರ್. ಸೌದಾಗರ, ಡಾ.ಶಶಿಕಲಾ ಹೂಗಾರ ಯಾಮಿನಿ ಶಹಾ, ಮಹಾದೇವಿ ಪಾಟೀಲ, ರಾಜೇಶ್ವರಿ ಮೋಪಗಾರ, ಶ್ರೀಶೈಲ ಹೂಗಾರ, ನಿಂಗಣ್ಣ ಕೇರಿ, ಮಹಾಂತೇಶ ಸ್ವಾಮಿ, ವಿ.ವಿ.ಹಿರೆಮಠ, ಉಪಸ್ಥಿತರಿದ್ದರು.




### ಕಲಾಕೃತಿಗಳ ಮೂಲಕ ಗೌರವ ನಮನ



ಇದಕ್ಕೂ ಮೊದಲು ನಡೆದ ಚಿತ್ರ ನಮನ ಕಾರ್ಯಕ್ರಮದಲ್ಲಿ ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಕಲಾವಿದರುಗಳಾದ ವಿಜಯಪುರದ ಪಿ.ಎಸ್.ಕಡೇಮನಿ, ವಿದ್ಯಾಧರ ಸಾಲಿ, ರಮೇಶ ಚವ್ಹಾಣ, ಬಿ.ಎಸ್.ಪಾಟೀಲ, ಎ.ಜಿ.ನೆಲ್ಲಗಿ, ಶಿವಣ್ಣ ಗೊಳಸಂಗಿ, ರಾಘವೇಂದ್ರ ಪಾಟೀಲ, ಎಸ್. ಟಿ. ಕೆಂಭಾವಿ. ಶಿವಾನಂಧ ಅಥಣಿ, ಹಂಪಿಯ ಕೆ. ಕೆ. ಮಕಾಳಿ, ಜಮಖಂಡಿಯ ಜಿ. ವಿ. ಹಂಪಣ್ಣವರ, ಎಚ್. ಎಂ.ವಿಶ್ವನಾಥ ಧಾರವಾಡದ ಎನ್. ಆರ್. ನಾಯ್ಕರ್, ಕುಮಾರ ಕಾಟೆನಹಳ್ಳಿ, ಕಲಬುರಗಿಯ ಬಸವರಾಜ ಕಮಾಜಿ, ಬಾಗಲಕೋಟೆಯ ಶಿವು ಹೂಗಾರ ಇಲಕಲ್ಲಿನ ಚಂದ್ರಕಾಂತ ಸರೋದೆ, ಶ್ರೀಶೈಲ್ ಧೋತ್ರೆ, ಎಸ್. ಎನ್.ಪೋಚಗುಂಡಿ ತಮ್ಮ ಕಲಾಕೃತಿಗಳನ್ನು ರಚಿಸುವ ಮೂಲಕ ವಿಜಯ ಸಿಂಧೂರರವರಿಗೆ ಕಲಾಕೃತಿಗಳ ಮೂಲಕ ಗೌರವ ನಮನಗಳನ್ನು ಸಲ್ಲಿಸಿದರು.

■ ರಮೇಶ ಚವ್ಹಾಣ
ಕಾರ್ಯದರ್ಶಿ ಕ್ಯಾನವಾಸ್ ಆರ್ಟ್ ಫೌಂಡೇಷನ್, ವಿಜಯಪುರ

## ಕಾನೂನು ಬಾಹಿರ ವಕ್ಫ್ ಸೊತ್ತೆಂದು ದಾಖಲೆ ಕೈಬಿಡಲು ಆಗ್ರಹ



■ ಉದಯರಶ್ಮಿ ದಿನಪತ್ರಿಕೆ

### ವಿಜಯಪುರ ಮಹಾನಗರ ಪಾಲಿಕೆ ಸದಸ್ಯರಿಂದ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ರಿಗೆ ಮನವಿ

ವಿಜಯಪುರ: ಭಾರತೀಯ ಪುರಾತತ್ವ ಇಲಾಖೆಗೆ, ಮಹಾನಗರ ಪಾಲಿಕೆ ಹಾಗೂ ಕಂದಾಯ ಇಲಾಖೆಗೆ ಸೇರಿರುವ ಆಸ್ತಿಗಳನ್ನು ಕಂದಾಯ ದಾಖಲೆಗಳಲ್ಲಿ ಕಾನೂನು ಬಾಹಿರವಾಗಿ ವಕ್ಫ್ ಸೊತ್ತು ಎಂದು ದಾಖಲಿಸಿದ್ದನ್ನು ತೆರವುಗೊಳಿಸಲು ಒತ್ತಾಯಿಸಿ ವಿಜಯಪುರ ಮಹಾನಗರ ಪಾಲಿಕೆ ಸದಸ್ಯರು ಸೋಮವಾರ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರಿಗೆ ಮನವಿ ಸಲ್ಲಿಸಿದರು.

ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ನಡೆದ ವಿಜಯಪುರ ಜಿಲ್ಲೆಯ ಮುತ್ತಾವಲ್ಲಿಗಳ ಸಮ್ಮೇಳನ ಮತ್ತು ವಕ್ಫ್ ಅದಾಲತ್ ದಲ್ಲಿ ಭಾಗವಹಿಸಿದ್ದ ಸಚಿವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿ, ನಗರ ಮತ್ತು ವಿಜಯಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಕಾನೂನು ಬಾಹಿರವಾಗಿ ವಕ್ಫ್ ಆಸ್ತಿಯನ್ನಾಗಿ ದಾಖಲು ಮಾಡಿರುವುದನ್ನು ದಾಖಲೆ ಸಹಿತ ಮನವ-ರಿಕೆ ಮಾಡಿ, ವಕ್ಫ್ ಸೊತ್ತು ಮಾಡಿರುವುದನ್ನು ತೆರವುಗೊಳಿಸಲು ಒತ್ತಾಯಿಸಿದರು.

ಅಲ್ಲದೆ, ಇದೀಗ ಜಿಲ್ಲಾಡಳಿತ ತಯಾರಿಸಿದ ಯಾದಿ ಪ್ರಕಾರ ವಿಜಯಪುರ ಜಿಲ್ಲೆಯಾದ್ಯಂತ ಮಹಾನಗರ ಪಾಲಿಕೆ, ಭಾರತೀಯ ಪುರಾತತ್ವ, ಕಂದಾಯ ಇಲಖೆಗೆ ಒಳಪಟ್ಟ ಸುಮಾರು 357 ಜಮೀನುಗಳು ವಕ್ಫ್ ಹೆಸರಿನಲ್ಲಿ ದಾಖಲಾಗುವ ಸಂಭವವಿದೆ. ಇಂತಹ ಕಂದಾಯಿಕ ಬದಲಾವಣೆ ಮಾಡಬೇಕಾದರೆ, ನಿಯಮಾನುಸಾರ ಮಾಡಬೇಕಾಗುತ್ತದೆ. ಇತ್ತೀಚಿನ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಸಹ ಚನ್ನಮ್ಮ ಹಿರೇಮಠ ಅವರ ಪ್ರಕರಣಕ್ಕೆ ಸಂಬಂಧಿಸಿದಂತೆ, ಐತಿಹಾಸಿಕ ತೀರ್ಪು ನೀಡಿದೆ.

ಸದರಿ ತೀರ್ಪಿನ ಪ್ರಕಾರ ಕಂದಾಯ ದಾಖಲೆಗಳಲ್ಲಿ ಬದಲಾವಣೆ ಮಾಡಬೇಕಾದರೆ ಆಸ್ತಿಗೆ ಸಂಬಂಧಪಟ್ಟವರ ಹಾಗೂ ಸ್ಥಾನಿಕ ವಿಚಾರಣೆ ಮಾಡದೇ ಮಾಡುವುದು ಕಾನೂನು ಬದ್ದವಲ್ಲವೆಂದು ಹೇಳಿದೆ. ಹೀಗಾಗಿ ಕಂದಾಯ ದಾಖಲೆಗಳಲ್ಲಿ ಕಾನೂನು ಬಾಹಿರವಾಗಿ ವಕ್ಫ್ ಸೊತ್ತು ಎಂದು ದಾಖಲಿಸುವುದನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು.

ಮಹಾನಗರ ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ, ಕಿರಣ ಪಾಟೀಲ, ಜವಾಹಾರ ಗೋಸಾವಿ, ಶಿವರುದ್ರ ಬಾಗಲಕೋಟ, ಮುಖಂಡ ದತ್ತಾ ಗೊಲಂಡೆ ಮತ್ತಿತರರು ಇದ್ದರು.

## ದೇಗುಲಕ್ಕೆ ಕಲ್ಲೆಸೆದ ಆರೋಪಿಗಳ ಮಂಪರು ಪರೀಕ್ಷೆ ಮಾಡಿಸಿ: ಯತ್ನಾಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಗಣಪತಿ ಚೌಕ್ ದಲ್ಲಿರುವ ಗಣೇಶ ದೇವಸ್ಥಾನದ ಗಾಜಿಗೆ ಕಲ್ಲೆಸೆದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ, ಬಂಧಿತ ಆರೋಪಿಗಳನ್ನು ಮಂಪರು ಪರೀಕ್ಷೆಗೆ ಒಳಪಡಿಸಿ, ಈ ಕೃತ್ಯದ ಹಿಂದಿರುವ ಶಕ್ತಿಗಳನ್ನು ಬಯಲಿಗೆ ಎಳೆಯಬೇಕು ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಶಾಂತವಾಗಿರುವ ನಮ್ಮ ವಿಜಯಪುರ ನಗರದಲ್ಲಿ ಶಾಂತಿ ಕದಡಬೇಕು, ಕೋಮು ಗಲಭೆ ಸೃಷ್ಟಿಸಲೆಂದೆ ನಗರದ ಗಣಪತಿ ಚೌಕ್ ದಲ್ಲಿರುವ ಹಿಂದೂಗಳ ಆರಾಧ್ಯದೈವ ಗಣೇಶ ದೇವಸ್ಥಾನಕ್ಕೆ ಕಲ್ಲೆಸೆದು, ಗಾಜು ಒಡೆದು ಹಾಕುವ ಮೂಲಕ ಹಿಂದೂಗಳ ಭಾವನೆಗೆ ಧಕ್ಕೆ ತರುವ ಕೆಲಸ ಮಾಡಿರುವುದು ಖಂಡನೀಯ.

ದೇವಸ್ಥಾನಕ್ಕೆ ಕಲ್ಲೆಸೆದ ಆರೋಪಿಗಳು ಅಪ್ರಾಪ್ತರಾಗಿದ್ದರೆ, ಇವರ ಹಿಂದಿನ ಶಕ್ತಿಗಳು ಯಾವವು? ರಾಜಕೀಯ ವ್ಯಕ್ತಿಗಳ ಕೈವಾಡವಿದೆಯೇ? ಗಲಭೆ ಸೃಷ್ಟಿಸುವ ಸಂಘಟನೆಗಳ ಕುಮ್ಮಕ್ಕು ಇದೆಯೇ? ಸತ್ಯ ಹೊರ ಬರಬೇಕೆಂದರೆ, ಬಂಧಿತ ಆರೋಪಿಗಳನ್ನು ಮಂಪರು ಪರೀಕ್ಷೆ ನಡೆಸಬೇಕು. ಇವರ, ಇವರ ಸಂಬಂಧಿಗಳು, ಗೆಳೆಯರು ಮತ್ತು ಇವರು ವಾಸಿಸುವ ಟಕ್ಕೆಯಲ್ಲಿ ಯಾರ ಯಾರ ಜೊತೆ ಸಂಪರ್ಕ ಹೊಂದಿದ್ದಾರೋ ಎಲ್ಲರ ಮೊಬೈಲ್ ಕಾಲ್ ತಪಾಸಣೆ ನಡೆಸಬೇಕು. ಯಾರಾದರೂ ನಗರ ತೊರೆದಿದ್ದಾರೆಯೇ? ಎಲ್ಲರನ್ನು ಸಮಗ್ರವಾಗಿ ತನಿಖೆ ಒಳಪಡಿಸಬೇಕು.

ಈ ಕೃತ್ಯಯಿಂದ ನಿಷೇಧಿತ ದೇಶದ್ರೋಹಿ ಸಂಘಟನೆಗಳು, ಬಾಂಗ್ಲಾ ನುಸುಳುಕೋರರು, ಸೀಮಿ ಸಂಘಟನೆಗಳು ವಿಜಯಪುರ ನಗರದಲ್ಲಿ ಜೀವಂತವಾಗುತ್ತಿವೆಯೇ? ಎಂಬುದರ ಬಗ್ಗೆಯೂ ತನಿಖೆ ನಡೆಸಬೇಕು. ಆರೋಪಿಗಳು ಗಾಂಜಾ, ಅಫೀಮು ಮತ್ತಿನಲ್ಲಿದ್ದರೆ ಅಥವಾ ಕುಡಿದ ಅಮಲಿನಲ್ಲಿದ್ದರೆ, ಅಪ್ರಾಪ್ತರು ಅವ್ಯಹತವಾಗಿ ಕುಡಿತದ ಚಟಕ್ಕೆ ಬಿದ್ದಿರುವುದು ಸಂಶಯ ಮೂಡುತ್ತಿದೆ.

ವಿಜಯಪುರ ನಗರದಲ್ಲಿ ಶಾಂತಿ, ನೆಮ್ಮದಿ, ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಮುಂದೆ ಇಂತಹ ದ್ರೋಹಿಗಳಿಂದ ಆಗುವ ಅನಾಹುತ ತಪ್ಪಿಸಲು ಗಣಪತಿ ಚೌಕ್ ದಲ್ಲಿರುವ ಗಣೇಶ ದೇವಸ್ಥಾನಕ್ಕೆ ಕಲ್ಲೆಸೆದು, ಗಾಜು ಒಡೆದು ಹಾಕಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಒತ್ತಾಯಿಸಿದ್ದಾರೆ.

### ಮಹಾಂತೇಶ ಬಿರಾದಾರ ರ 'ಮುಖಪುಸ್ತಕದ ಮರೆಯದ ಮುಖಗಳು' ಕೃತಿ ಲೋಕಾರ್ಪಣೆಗೊಳಿಸಿದ ಡಾ.ಸಿದ್ದರಾಮಯ್ಯ ಅಭಿಮತ

## ಯುವಕರನ್ನು ರೋಗಗ್ರಸ್ತರನ್ನಾಗಿಸುತ್ತಿರುವ ವಾಟ್ಸ್ ಆಪ್, ಫೇಸ್ಬುಕ್

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ವಾಟ್ಸ್ ಆಪ್, ಫೇಸ್ ಬುಕ್ ವಿಶ್ವವಿದ್ಯಾಲಯಗಳು ದುರ್ಬಳಕೆ ಆಗುತ್ತಿರುವ ಸಂದರ್ಭದಲ್ಲಿ ಡಾ.ಮಹಾಂತೇಶ ಬಿರಾದಾರ ಅವರ 'ಮುಖಪುಸ್ತಕದ ಮರೆಯದ ಮುಖಗಳು' ಕೃತಿ ಮಾರ್ಗದರ್ಶಕವಾಗಿದೆ ಎಂದು ಹಿರಿಯ ಲೇಖಕ ಡಾ. ಎಸ್.ಜಿ.ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ನಗರದ ಬಸವ ಸಮಿತಿಯಲ್ಲಿ ಮೈಸೂರಿನ ಕವಿತಾ ಪ್ರಕಾಶನ ಏರ್ಪಡಿಸಿದ್ದ ಸಮಾರಂಭದಲ್ಲಿ ಅವರು ಕೃತಿ ಬಿಡುಗಡೆಗೊಳಿಸಿ ಮಾತನಾಡಿದರು.

ವಾಟ್ಸ್ ಆಪ್, ಫೇಸ್ ಬುಕ್ ವಿಶ್ವವಿದ್ಯಾಲಯಗಳು ಯುವಕರನ್ನು ರೋಗಗ್ರಸ್ತರನ್ನಾಗಿ ಮಾಡುತ್ತಿವೆ. ಇದರಿಂದ ಸಾಮಾಜಿಕ ವಾತಾವರಣ ಹಾಳಾಗುವ ಹಾಗೆ ಯುವಕರ ನಡವಳಿಕೆಗಳು ಇರುತ್ತವೆ. ಇಂಥ ಸಂದರ್ಭದಲ್ಲಿ ಮಹಾಂತೇಶ ಬಿರಾದಾರ ಅವರು ಫೇಸ್ ಬುಕ್ ಮೂಲಕ ಬರೆದ ಲೇಖನಗಳು ಮಾದರಿಯಾಗಿವೆ ಎಂದು ಹೇಳಿದರು.

ವಾಟ್ಸ್ ಆಪ್, ಫೇಸ್ ಬುಕ್ ಮೂಲಕ ಸುಳ್ಳಿನ ಚ-ರಿತ್ರೆ ಬೋಧನೆಯಾಗುತ್ತಿದೆ. ಇದರಿಂದ ಚಾರಿತ್ರಿಕ ಪ್ರಜ್ಞೆ ಕಳೆದುಕೊಂಡಿದ್ದೇವೆ ಜೊತೆಗೆ ವರ್ತಮಾನ ನಮಗೆ ಅರ್ಥವಾಗುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಬರಹಕ್ಕೆ ಬೇಕಾದ ಸಾರ ಸಂಗ್ರಹ ಎಲ್ಲರಿಗೂ ದಕ್ಕುವುದಿಲ್ಲ. ಹಾಗೆಯೇ ಒಬ್ಬ ವ್ಯಕ್ತಿಯ ಸಮಗ್ರ ಪರಿಚಯ ಕಷ್ಟಸಾಧ್ಯ. ಅನುಭವ ದ್ರವ್ಯ ಇರಬೇಕು ಜೊತೆಗೆ ಭಾಷಾ ಸಾಮರ್ಥ್ಯವೂ ಇರಬೇಕು. ಈ ಗುಣಗಳಿರುವ ಮಹಾಂತೇಶ ಬಿರಾದಾರ ಅವರ ಕೃತಿ ಆಪ್ತವಾಗಿ ಓದಿಸಿಕೊಂಡು ಹೋಗುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೃತಿ ಪರಿಚಯಿಸಿದ ಹಿರಿಯ ಲೇಖಕ ರಂಜಾನ್ ದರ್ಗಾ, ವಿಜಾಪುರ ಮಂದಿ ಎಂದೂ ಆಗೋದಿಲ್ಲ ಚಿಂದಿ. ಆದರೆ ವಿಜಾಪುರ ಮಂದಿ ಹಿಂದುಳಿದಿಲ್ಲ. ಹಿಂದುಳಿವ ಹಾಗೆ ವ್ಯವಸ್ಥೆ ಮಾಡಿದೆ. ಆದರೂ ವಿಜಾಪುರ ಮಂದಿ ಬಹಳ ಸ್ವಾಭಿಮಾನಿಗಳು ಎಂದು ತಿಳಿಸಿದರು.

ಮನುಷ್ಯರನ್ನು ಮನುಷ್ಯರನ್ನಾಗಿ ನೋಡದೆ ಇರುವುದು ದುರಂತ. ಆದರೆ ಮಹಾಂತೇಶ ಬಿರಾದಾರ ಅವರು ಜಾತಿರಹಿತವಾಗಿ ತಮ್ಮ ಕೃತಿಯನ್ನು ಕಟ್ಟಿಕೊಟ್ಟಿದ್ದಾರೆ. ಅವರ ಹೃದಯ ಸಂಪತ್ತು ಮತ್ತು ಮಿತ್ರತ್ವದ ಶಕ್ತಿ ದೊಡ್ಡದು ಎಂದು ಶ್ಲಾಘಿಸಿದರು.

ಮುಖ್ಯ ಅತಿಥಿಗಳಾಗಿ ಆದಾಯ ತೆರಿಗೆ ಇಲಾಖೆಯ ಪ್ರಧಾನ ಆಯುಕ್ತ ಶ್ರೀನಿವಾಸ ಬಿದರಿ, ಕೃಷಿ ಇಲಾಖೆ ಆಯುಕ್ತ ವೈ.ಎಸ್.ಪಾಟೀಲ, ಆಶಾ ಎಂ.ಬಿ.ಪಾಟೀಲ, ಬಿಎಲ್ ಡಿಇ ಸಂಸ್ಥೆ ನಿರ್ದೇಶಕ ಬಸವನಗೌಡ ಎಂ.ಪಾಟೀಲ, ಕೆಎಸ್ ಡಿಎಲ್ ವ್ಯವಸ್ಥಾಪಕ ನಿರ್ದೇಶಕ ಪಿಕೆಎಂ ಪ್ರಶಾಂತ್ ಹಾಜರಿದ್ದರು. ಬಸವ ಸಮಿತಿ ಅಧ್ಯಕ್ಷ ಅರವಿಂದ ಜತ್ತಿ ಅಧ್ಯಕ್ಷತೆ ವಹಿಸಿದ್ದರು.

ಮಹಾಂತೇಶ ಬಿರಾದಾರ ಸ್ವಾಗತಿಸಿದರು. ಗಣೇಶ ಅಮೀನಗಡ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮಕ್ಕೆ ಮುನ್ನ ಜ್ಯೋತಿರ್ಲಿಂಗ ಹೊನಕಟ್ಟಿ ಜಾನಪದ ಹಾಡುಗಳನ್ನು ಹಾಡಿದರು.

### ಮರೆಯಾಗದ ಲೇಖಕ

ಮುಖ್ಯ ಅತಿಥಿಯಾದ ಕೃಷಿ ಇಲಾಖೆ ಆಯುಕ್ತ ವೈ. ಎಸ್.ಪಾಟೀಲ ಮಾತನಾಡಿ, ಸಚಿವರಾದ ಎಂ.ಬಿ.ಪಾಟೀಲ ಅವರ ಜೊತೆ ಹೆಚ್ಚು ಸಮಯ ಕಳೆದವರು ಮಹಾಂತೇಶ ಬಿರಾದಾರ. ಅಧಿಕಾರ ಕೇಂದಿತ ವಲಯದಲ್ಲಿದ್ದರೂ ಅವರೊಳಗಿನ ಲೇಖಕ ಮರೆಯಾಗದ ಹಾಗೆ ನೋಡಿಕೊಂಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಒಳ್ಳೆಯತನವನ್ನು ಗುರುತಿಸುವ, ಗುರುತಿಸಿದವರನ್ನು ಪರಿಚಯಿಸುವ ಒಳ್ಳೆಯ ಗುಣ ಮಹಾಂತೇಶ ಬಿರಾದಾರ ಅವರಲ್ಲಿದೆ ಎಂದು ಅಭಿನಂದಿಸಿದರು.



## ಪ್ರೌಢ ವಿಭಾಗದ 'ಬಾಸ್ಕೆಟ್ ಬಾಲ್'ನಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಬಂಜಾರಾ ಪ್ರೌಢ ಶಾಲೆ ಹಾಗೂ ಬಸವೇಶ್ವರ ಪ್ರೌಢ ಶಾಲೆಯ ವಿದ್ಯಾರ್ಥಿನಿಯರು ಧಾರವಾಢದ ಮಲ್ಲಸಜ್ಜನ ಶಾಲಾ ಆವರಣದಲ್ಲಿ ನಡೆದ ವಿಭಾಗೀಯ ಮಟ್ಟದ ಪ್ರೌಢ ಶಾಲಾ ಹಂತದ ಬಾಸ್ಕೆಟ್ ಬಾಲ್ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ತೋರುವ ಮೂಲಕ ರಾಜ್ಯ ಮಟ್ಟದ ಬಾಸ್ಕೆಟ್ ಬಾಲ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗುವ ಮೂಲಕ ಜಿಲ್ಲೆಯ ಹಾಗೂ ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಿದ ವಿದ್ಯಾರ್ಥಿಗಳ ಈ ಸಾಧನೆಗೆ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಿ.ಎಲ್.ಚವ್ಹಾಣ್, ಕಾರ್ಯಾಧ್ಯಕ್ಷ ಕೆ.ಜಿ.ರಾಠೋಡ, ಕಾರ್ಯದರ್ಶಿ ರಾಜಶೇಖರ ಚವ್ಹಾಣ್, ಶಾಲಾ ಮುಖ್ಯ ಗುರು ಇ.ಡಿ.ಲಮಾಣಿ, ಬಸವೇಶ್ವರ ಪ್ರೌಢ ಶಾಲೆಯ ಮುಖ್ಯ ಗುರು ಪರಶುರಾಮ ಲಮಾಣಿ, ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಲ್.ದೊಡಮನಿ ಹಾಗೂ ಬಾಬುರಾಯ ಹಂಚನಾಳ, ಟೀಮ್ ಕೋಚ್ ಎಂ.ಬಿ.ಪಾಟೀಲ, ಸೇರಿದಂತೆ ಶಾಲಾ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ಸಿಂದಗಿ ಅಭಿವೃದ್ಧಿಗೆ ರೂ.86 ಕೋಟಿಗೂ ಅಧಿಕ ಅನುದಾನ ಮಂಜೂರು :ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕೇವಲ 17 ತಿಂಗಳಲ್ಲಿ ಅವಧಿಯಲ್ಲಿ ಸರ್ಕಾರದ ಮಟ್ಟದಲ್ಲಿ ಹೋರಾಟ ಮಾಡಿ ಸಿಂದಗಿ ನಗರದ ಅಭಿವೃದ್ಧಿಗಾಗಿ ರೂ.86 ಕೋಟಿಗೂ ಅಧಿಕ ರೂಪಾಯಿಗಳನ್ನು ಮಂಜೂರು ಮಾಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದು ನನಗೆ ಸಂತಸ ತಂದಿದೆ ಎಂದು ಶಾಸಕ ಅಶೋಕ್ ಮನಗೂಳಿ ಹೇಳಿದರು. ಪಟ್ಟಣದ ಬಸವೇಶ್ವರ ವೃತ್ತದ ಬಳಿ ರವಿವಾರ ಲೋಕೋಪಯೋಗಿ ಇಲಾಖೆ ವಿಜಯಪುರ ಆಯೋಜಿಸಿರುವ 2023-24ನೇ ಸಾಲಿನ ಅಪೆಂಡಿಕ್ಸ್- ಇ ಯೋಜನೆ ಅಡಿಯಲ್ಲಿ ಸುಮಾರು 5ಕೋಟಿ ರೂ. ಅನುದಾನದಲ್ಲಿ ರಾಷ್ಟ್ರೀಯ ಹೆದ್ದಾರಿ 50ರ ವರ್ತುಲ ರಸ್ತೆಯಿಂದ ಡೋಹರ್ ಕಕ್ಕಯ್ಯ ವೃತ್ತ, ಟಿಪ್ಪುಸುಲ್ತಾನ್ ವೃತ್ತದವರೆಗೆ ಮತ್ತು ರಾಜ್ಯ ಹೆದ್ದಾರಿ 16 ರಿಂದ ಶ್ರೀ ಬಸವೇಶ್ವರ ವೃತ್ತ, ಶ್ರೀ ಕನಕದಾಸ ವೃತ್ತ ರಾಷ್ಟ್ರೀಯ ಹೆದ್ದಾರಿ 50ರವರೆಗೆ ಸುಮಾರು 6.50 ಕಿ.ಮೀ. ವರೆಗೆ ಅಲಂಕಾರಿಕ ಬೀದಿ ದೀಪಗಳ ಅಳವಡಿಕೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಅಮೃತ್-2 ಯೋಜನೆಯ ಅಡಿಯಲ್ಲಿ ಸುಮಾರು 36 ಕೋಟಿ ಅನುದಾನದಲ್ಲಿ ಸಿಂದಗಿ ನಗರಕ್ಕೆ 24*7 ಕುಡಿಯುವ ನೀರಿನ ಯೋಜನೆ, ಸಿಂದಗಿ ನಗರದ 52 ಎಕರೆ ಪ್ರದೇಶದಲ್ಲಿ 1994ರಲ್ಲಿ ದಿ.ಎಂ.ಸಿ.ಮನಗೂಳಿ ಅವರ ಅಧಿಕಾರ ಅವಧಿಯಲ್ಲಿ ನಿರ್ಮಾಣಗೊಂಡ ಕೆರೆಗೆ 3.50ಕೋಟಿ ಅನುದಾನದಲ್ಲಿ ಕೆರೆ ಅಭಿವೃದ್ಧಿ ಮತ್ತು ಕೆರೆಯ ಪ್ರದೇಶದಲ್ಲಿ ಸಿಂದಗಿಯ ಸಿರಿ ಲಿಂ.ಶ್ರೀ ಶಾಂತವೀರ ಪಟ್ಟಾಧ್ಯಕ್ಷರ ಮೂರ್ತಿ ಅನಾವರಣ, 2ಕೋಟಿ ರೂ. ಅನುದಾನದಲ್ಲಿ ಗಾಂಧಿ ವೃತದಿಂದ ಆಲಮೇಲ ರಸ್ತೆಯವರೆಗೆ ಸಿಸಿ ರಸ್ತೆ ನಿರ್ಮಾಣ ಸೇರಿದಂತೆ ಸಿಂದಗಿ ನಗರದ ಅಭಿವೃದ್ಧಿಗಾಗಿ 39 ಕಾಮಗಾರಿಗಳು ಮಂಜೂರಾತಿ ಪಡೆದುಕೊಂಡಿದೆ. ಸಿಂದಗಿ ನಗರದಲ್ಲಿ 274 ಹೊಸ ಅಲಂಕಾರಿಕ ವಿದ್ಯುತ್ ಕಂಬಗಳನ್ನು ನಿರ್ಮಾಣ ಮಾಡುವ ಮೂಲಕ ಜನ ನೀಡಿದ ಅಧಿಕಾರವನ್ನು ಜನರ ಕಲ್ಯಾಣಕ್ಕಾಗಿ ನಾನು ಮಾಡಲು ಸದಾ ಸಿದ್ದನಾಗಿದ್ದೇನೆ. ಪಟ್ಟಣವಲ್ಲದೇ ಸಿಂದಗಿ ಮತಕ್ಷೇತ್ರವನ್ನು ಜಿಲ್ಲೆಯಲ್ಲಿಯೇ ಅತ್ಯಂತ ಮಾದರಿ ಕ್ಷೇತ್ರವನ್ನಾಗಿ ಮಾಡುವ ಸಂಕಲ್ಪವನ್ನು ಹೊಂದಿದ್ದೇನೆ ಎಂದರು. ಈ ವೇಳೆ ಮಾಜಿ ಪುರಸಭೆ ಅಧ್ಯಕ್ಷ ಹಣಮಂತ ಸುಣಗಾರ ಮಾತನಾಡಿದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಸಾನಿಧ್ಯ ವಹಿಸಿದ ಸಾರಂಗಮಠದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು ಮಾತನಾಡಿ, ದಿ.ಎಂ.ಸಿ.ಮನಗೂಳಿಯವರು ತಾವು ಇರುವವರೆಗೂ ಜನರ ಕಲ್ಯಾಣಕ್ಕಾಗಿ ದುಡಿದಂತವರು. ಅವರ ಸುಪುತ್ರ ಶಾಸಕ ಅಶೋಕ ಮನಗೂಳಿ ಅವರು ಈ ಕ್ಷೇತ್ರದ ಅಭಿವೃದ್ಧಿಗೆ ಸಂಕಲ್ಪ ತೊಟ್ಟಿದ್ದಾರೆ. ಕ್ಷೇತ್ರದ ಅಭಿವೃದ್ಧಿಗೆ ಅವರು ಸದಾ ಕಂಕಣ ಬದ್ಧರಾಗಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಜಮಖಂಡಿಯ ಕೊಣ್ಣೂರಿನ ಹೊರಗಿನ ಕಲ್ಯಾಣಮಠದ ಡಾ.ವಿಶ್ವ ಪ್ರಭುದೇವ ಶಿವಾಚಾರ್ಯರು, ಆಸಂಗಿಹಾಳ ಆರೂಢಮಠದ ಶಂಕರಾನಂದ ಮಹಾಸ್ವಾಮಿಗಳು, ಪುರಸಭೆ ಅಧ್ಯಕ್ಷ ಶಾಂತವೀರ ಬಿರಾದಾರ, ಪುರಸಭೆ ಉಪಾಧ್ಯಕ್ಷ ರಾಜಣ್ಣ ನಾರಾಯಣಕರ, ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಡಾ.ಶಾಂತವೀರ ಮನಗೂಳಿ, ಭಾಷಾಸಾಬ ತಾಂಬೋಳಿ, ಪುರಸಭೆ ಸದಸ್ಯರಾದ ಬಸವರಾಜ ಯರನಾಳ, ಸಂದೀಪ ಚೌರ, ಹಾಸಿಂಪೀರ ಆಳಂದ, ನಗರ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಬಸವರಾಜ ಕಾಂಬಳೆ, ಕೆಡಿಪಿ ಸದಸ್ಯೆ ಮಹಾನಂದ ಬೊಮ್ಮಣ್ಣಿ, ಸಿದ್ದು ಮಲ್ಲೇದ, ಚೆನ್ನಪ್ಪ ಗೋಣಿ, ಲೋಕೋಪಯೋಗಿ ಇಲಾಖೆಯ ಎಇಇ ಅರುಣಕುಮಾರ ವಡಗೇರಿ, ಪುರಸಭೆ ಮುಖ್ಯಾಧಿಕಾರಿ ಸುರೇಶ ನಾಯಕ, ಸುನಂದಾ ಯಂಪುರೆ, ಜಯಶ್ರೀ ಹದನೂರ, ಸಾಯಬಣ್ಣ ಪುರದಾಳ, ಕುಮಾರ ದೇಸಾಯಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬಾಸ್ಕೆಟ್ ಬಾಲ್' ನಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನಂ.24 ಹಾಗೂ ಆಂಗ್ಲ ಮಾಧ್ಯಮ ಬಂಜಾರಾ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿಯರು ಧಾರವಾಢದ ಮಲ್ಲಸಜ್ಜನ ಶಾಲಾ ಆವರಣದಲ್ಲಿ ನಡೆದ ವಿಭಾಗೀಯ ಮಟ್ಟದ ಪ್ರಾಥಮಿಕ ಶಾಲಾ ಹಂತದ 'ಬಾಸ್ಕೆಟ್ ಬಾಲ್' ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ತೋರುವ ಮೂಲಕ ರಾಜ್ಯ ಮಟ್ಟದ ಬಾಸ್ಕೆಟ್ ಬಾಲ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಿ.ಎಲ್.ಚವ್ಹಾಣ್, ಕಾರ್ಯಾಧ್ಯಕ್ಷರಾದ ಕೆ.ಜಿ.ರಾಠೋಡ, ಕಾರ್ಯದರ್ಶಿ ರಾಜಶೇಖರ ಚವ್ಹಾಣ್, ಶಾಲಾ ಮುಖ್ಯ ಗುರು ಸಂದೀಪ ರಾಠೋಡ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ವಿ.ಆರ್.ಹಾಲವರ, ಟೀಮ್ ವರ್ಕರ್ ಬಾಬುರಾಯ ಹಂಚನಾಳ, ಎಸ್.ಎಲ್.ದೊಡಮನಿ, ಟೀಮ್ ಕೋಚ್ ಎಂ.ಬಿ.ಪಾಟೀಲರು ಸೇರಿದಂತೆ ಶಾಲಾ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಹರ್ಷವ್ಯಕ್ತಪಡಿಸಿದ್ದಾರೆ.

### ಪತ್ರಿಕಾ ಗೋಷ್ಠಿಯಲ್ಲಿ ಡಾ.ಪ್ರಭುಸಾರಂಗದೇವ ಶಿವಾಚಾರ್ಯರಿಂದ ಮಾಹಿತಿ

## ಅಂತರಾಷ್ಟ್ರೀಯ ಕೃಷಿ ತಜ್ಞ ಸುಬ್ಬಯ್ಯ ಅಯ್ಯಪ್ಪನ್ ರಿಗೆ ಭಾಸ್ಕರ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಪಟ್ಟಣದ ಸಾರಂಗಮಠದ ಕಾಯಕಯೋಗಿ ಲಿಂ. ಚೆನ್ನವೀರ ಮಹಾಸ್ವಾಮಿಗಳ 130 ನೇ ಜಯಂತ್ಯೋತ್ಸವ ನಿಮಿತ್ಯ ನ.13 ರಿಂದ ಡಿ.03ರ ವರೆಗೆ ಸುಮಾರು 21ದಿನಗಳ ಕಾಲ ವಿವಿಧ ಕಾರ್ಯಕ್ರಮಗಳು ಜರುಗುವವು ಎಂದು ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಸಾರಂಗಮಠದಲ್ಲಿ ರವಿವಾರ ಹಮ್ಮಿಕೊಂಡ ಪತ್ರಿಕಾ ಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಪ್ರತಿನಿತ್ಯ ಸಂಜೆ 6.30ಗಂಟೆಗೆ ಉಜ್ಜಯನಿಯ ಲಿಂ.ಶ್ರೀ.ಸಿದ್ದಲಿಂಗ ಶಿವಾಚಾರ್ಯರ ಪುರಾಣ-ಪ್ರವಚನವನ್ನು ಶಾಹಪೂರದ ಶ್ರೀ ಸೂಗೂರೇಶ್ವರ ಶ್ರೀಗಳಿಂದ ನೆರವೇರುವುದು. ಲಿಂ ಶ್ರೀ ಚನ್ನವೀರ ಮಹಾಸ್ವಾಮಿಗಳ ಜಯಂತಿ ದಿನವಾದ ನ.18 ರಂದು ತಾಲೂಕಿನ ಶ್ರೇಷ್ಠ ಕೃಷಿಕರಿಗೆ ನೀಡುವ ಸಾರಂಗಶ್ರೀ ಕೃಷಿ ಪ್ರಶಸ್ತಿಯನ್ನು ಆಲಮೇಲದ ಸಾವಯವ ಕೃಷಿಕ ಸುನೀಲ ನಾರಾಯಣಕರ ಅವರಿಗೆ ಪ್ರಶಸ್ತಿ ಫಲಕ ಮತ್ತು 11 ಸಾವಿರ ನಗದನ್ನು ನೀಡಿ ಗೌರವಿಸಲಾಗುವುದು.

ಖ್ಯಾತ ಖಗೋಳಶಾಸ್ತ್ರಜ್ಞ ಭಾಸ್ಕರಾಚಾರ್ಯ-2 ಅವರ ಸ್ಮರಣೆಗಾಗಿ ನೀಡುವ ಭಾಸ್ಕರ ರಾಷ್ಟ್ರೀಯ ಪ್ರಶಸ್ತಿಯನ್ನು ಈ ಬಾರಿ ಅಂತರಾಷ್ಟ್ರೀಯ ಕೃಷಿ ತಜ್ಞ, ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಮಾಜಿ ಪ್ರಧಾನ ನಿರ್ದೇಶಕ, ಪದ್ಮಶ್ರೀ ಸುಬ್ಬಯ್ಯ ಅಯ್ಯಪ್ಪನ್ ಅವರಿಗೆ ಭಾಸ್ಕರ ಪ್ರಶಸ್ತಿ ಮತ್ತು 1 ಲಕ್ಷ ನಗದನ್ನು ನೀಡಿ ಗೌರವಿಸಲಾಗುವುದು. ಈ ಹಿಂದೆ ದೇಶದ ಖ್ಯಾತ ವಿಜ್ಞಾನಿಗಳಾದ ಸಿ.ಎನ್.ರಾವ್, ಯು.ಆರ್.ರಾವ್, ಡಾ.ಎ.ಎಸ್.ಪಾಟೀಲ, ಕೆ.ಕಸ್ತೂರಿರಂಗನ, ಇಸ್ರೋ ಮಾಜಿ ಅಧ್ಯಕ್ಷ ಡಾ.ಕಿರಣಕುಮಾರ ಅವರಿಗೆ ನೀಡಿ ಗೌರವಿಸಿದೆ. ನ.27ರಂದು ಸಿದ್ಧಾಂತ ಶಿಖಾಮಣಿ ಕರ್ತೃ ಸಾಲೋಟಗಿ ಶ್ರೀ ಶಿವಯೋಗಿ ಶಿವಾಚಾರ್ಯರ ಸ್ಮರಣೆಯಲ್ಲಿ ನೀಡುವ ಶಿವಯೋಗಿ ಶಿವಾಚಾರ್ಯ ಪ್ರಶಸ್ತಿಯನ್ನು ಮಡಕೇರಿಯ ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಸಿ.ಶಿವಕುಮಾರಸ್ವಾಮಿ ಅವರಿಗೆ ಪ್ರಶಸ್ತಿ ಮತ್ತು 1 ಲಕ್ಷ ನಗದು ನೀಡಿ ಗೌರವಿಸಲಾಗುವುದು. ಡಿ.2 ರಂದು ಶ್ರೀ ವೀರಭದ್ರೇಶ್ವರ ಮತ್ತು ಭದ್ರಕಾಳಿ ಅಮ್ಮನವರ ಕಲ್ಯಾಣ ಮಹೋತ್ಸವ ಮತ್ತು ಡಿ.3ರಂದು ಶ್ರೀವೀರಭದ್ರ ದೇವರ ಮತ್ತು ಭದ್ರಕಾಳಿ ಅಮ್ಮನವರ ಮೂರ್ತಿಯನ್ನು ಬೆಳ್ಳಿ ರಥದೊಂದಿಗೆ ಮಹಿಳೆಯರೆ ಎಳೆಯುವ ಮೂಲಕ ಜಾತ್ರಾ ಮಹೋತ್ಸವ ನಡೆಯಲಿದೆ. ಅಂದು ಪುರಾಣ ಪ್ರವಚನ ಮುಕ್ತಾಯ ಸಮಾರಂಭ ನೆರವೇರುವುದು. ಕಾರಣ ಸಿಂದಗಿಯ ಸದ್ಭಕ್ತ ಮಂಡಳಿ ಶ್ರೀಮಠದಲ್ಲಿ ಜರುಗುವ ಎಲ್ಲ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದು ಸಾರಂಗ ಶ್ರೀಗಳು ತಿಳಿಸಿದ್ದಾರೆ.

ಪತ್ರಿಕಾ ಗೋಷ್ಠಿಯಲ್ಲಿ ಜಮಖಂಡಿಯ ಕೊಣ್ಣೂರಿನ ಹೊರಗಿನ ಕಲ್ಯಾಣಮಠದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಶಾಸಕ ಅಶೋಕ ಮನಗೂಳಿ, ಅಶೋಕ ವಾರದ, ಡಾ.ಶರಣಬಸವ ಜೋಗೂರ, ವಿರೇಶ ಜೋಗೂರ, ಮಲ್ಲಿಕಾರ್ಜುನ ಶಂಬೇವಾಡ, ಮಾಜಿ ಜಿಪಂ ಸದಸ್ಯ ಮಹಾಂತಗೌಡ ಪಾಟೀಲ ಸೇರಿದಂತೆ ಅನೇಕರಿದ್ದರು.

## ಡಾ.ಚೈತನಾ ಅವರ ಕೃತಿಗೆ ದತ್ತಿ ಪುಸ್ತಕ ಬಹುಮಾನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬುದ್ಧ ಬಸವ ಗಾಂಧಿ ಟ್ರಸ್ಟ್ ರಿ ಸಿದ್ಧನಹಳ್ಳಿ ಬೆಂಗಳೂರು ಇವರು ಆಯೋಜಿಸಿದ್ದ ರಾಜ್ಯಮಟ್ಟದ 15ನೇ ಕನ್ನಡ ಸಾಹಿತ್ಯ ಸಂಸ್ಕೃತಿ ಸಮಾವೇಶದಲ್ಲಿ, 2023-24 ರ ಹಿರಿಯ ಸಾಹಿತಿ ವಿಜಯಾ ನಾಗೇಶ್ ದತ್ತಿ ಪುಸ್ತಕ ಬಹುಮಾನಕ್ಕೆ ವಿಜಯಪುರದ ಯುವ ಸಂಶೋಧಕಿ ಡಾ.ಚೈತನಾ ಸಂಕೊ ಂಡರ ಬಯಲು ಬೊಂಬೆ ಕೃತಿ ಆಯ್ಕೆಯಾಗಿದೆ.ಈ ಪ್ರಯುಕ್ತ ರವಿವಾರ ಬೆಂಗಳೂರಿನಲ್ಲಿ ಶೇಷಾದ್ರಿಪುರಂ ನಲ್ಲಿ ಆಯೋಜಿಸಿದ್ದ ಸಮಾವೇಶದಲ್ಲಿ ಸಂಶೋಧಕಿ ಡಾ.ಚೈತನಾ ಅವರಿಗೆ ಪುಸ್ತಕ ಬಹುಮಾನ ನೀಡಿ ಗೌರವಿಸ ಲಾಯಿತು. ಬಯಲು ಬೊಂಬೆ ಇದೊಂದು ಸಂಶೋಧನಾ ಕೃತಿಯಾಗಿದ್ದು, ಯುವ ಸಂಶೋಧಕಿಯ ಕೃತಿಗೆ ದತ್ತಿ ಪುಸ್ತಕ ಬಹುಮಾನ ಲಭಿಸಿದ್ದಕ್ಕೆ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿ, ಅಭಿನಂದನೆ ತಿಳಿಸಿದ್ದಾರೆ.

## ಶೆರೆ ಮನುಷ್ಯನ ಆಯುಷ್ಯ ಕಡಿಮೆ ಮಾಡುತ್ತದೆ :ಅಮೃತಾನಂದ ಶ್ರೀ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಯುವಕರು ಶೆರೆ ಸಹವಾಸ ಮಾಡಿದರೆ ಅದರಿಂದ ಹೆಂಡತಿ, ಕುಟುಂಬ, ಸಮಾಜದಿಂದ ವಂಚಿತನಾಗುವದಲ್ಲದೆ ಶೆರೆ ಯುವಕರ ಆಯುಷ್ಯವನ್ನು ಕಡಿಮೆ ಮಾಡುತ್ತದೆ ಎಂದು ಗುರುದೇವ ಆಶ್ರಮ ಕಾತ್ರಾಳದ ಅಮೃತಾನಂದ ಶ್ರೀಗಳು ಹೇಳಿದರು. ಪಟ್ಟಣದ ಕಾಳಿಕಾ ಮಂದಿರದಲ್ಲಿ ತಾಲೂಕಾ ಆಡಳಿತ, ಅಬಕಾರಿ ಇಲಾಖೆ, ಪುರಸಭೆ ಇಂಡಿ ಮತ್ತು ಗ್ರಾ.ಪಂ ರೂಗಿ ಮತ್ತು ಶ್ರೀ ಕ್ಷೇತ್ರ ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆ ಸಹಯೋಗದಲ್ಲಿ ನಡೆದ ತಾಲೂಕಿನ ಬೊಳೆಗಾಂವ ಗ್ರಾಮ ವ್ಯಸನ ಮುಕ್ತ ಗ್ರಾಮ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಇಂದು ಮಹಿಳೆಯರಲ್ಲಿ ಹೆಚ್ಚು ಸಂಸ್ಕೃತಿ ಕಾಣುತ್ತಿದ್ದೇವೆ. ಬೊಳೆಗಾಂವ ಗ್ರಾಮವನ್ನು ವ್ಯಸನ ಮುಕ್ತ ಮಾಡಲು ಸರಕಾರದ ಸಹಭಾಗಿತ್ವದಲ್ಲಿ ಎಸಿ ಅಬೀದ ಗದ್ಯಾಳರವರು ಮಾಡುತ್ತಿರುವ ಪ್ರಯೋಗ ಜಿಲ್ಲೆಯಲ್ಲಿಯೆ ಮೊದಲನೆಯದು. ಇಲ್ಲಿ 70 ಜನ ಒಂದು ವಾರದಿಂದ ಭಾಗವಹಿಸಿ ವ್ಯಸನ ಮುಕ್ತರಾಗಿದ್ದು ಮತ್ತು ಮುಂಬರುವ ದಿನಗಳಲ್ಲಿ ಬೊಳೆಗಾಂವ ಗ್ರಾಮ ವ್ಯಸನ ಮುಕ್ತ ರಾಗುತ್ತಿರುವದು ಇದು ನಾವು ಗಾಂಧೀಜಿಗೆ ನೀಡುತ್ತಿರುವ ದೊಡ್ಡ ಕಾಣಿಕೆ ಎಂದರು. ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಮಾತನಾಡಿ, ಧರ್ಮಸ್ಥಳದ ಗ್ರಾಮಾಭಿವೃದ್ಧಿಯವರ ಪ್ರಯತ್ನದಿಂದ 70 ಜನರು ವ್ಯಸನ ಮುಕ್ತರಾಗಿದ್ದು ಅಂಧಕಾರದಿಂದ ಬೆಳಕಿನೆಡೆಗೆ ಬಂದಿದ್ದಾರೆ. ಯುವಕರು ತಮ್ಮಲ್ಲಿರುವ ಋಣಾತ್ಮಕ ವಿಚಾರಗಳನ್ನು ಬಿಟ್ಟು ಧನಾತ್ಮಕ ವಿಚಾರ ಮಾಡಿದರೆ ವ್ಯಸನ ಮುಕ್ತವಾಗಲು ಸಾಧ್ಯ ಎಂದರು. ಜನ ಜಾಗೃತಿ ವೇದಿಕೆ ರಾಜ್ಯ ಅಧ್ಯಕ್ಷ ಸೋಮನಗೌಡ ಪಾಟೀಲ ಮನಗೂಳಿ( ಅಪ್ಪುಗೌಡ ) ಮಾತನಾಡಿ ರಾಜ್ಯದಲ್ಲಿ ಒಂದು ಲಕ್ಷ 80 ಸಾವಿರ ಜನರನ್ನು ಜನ ಜಾಗೃತಿ ಸಂಸ್ಥೆ ವ್ಯಸನ ಮುಕ್ತ ಮಾಡಿ ಹೊಸ ಜೀವನ ನೀಡಿದ್ದಾರೆ, ಸಮಾಜದಲ್ಲಿ ಉತ್ತಮರಾಗಿ ಬದುಕಬೇಕಾಗಿದೆ. ಹೇಳುವದು ಸರಳವಿದೆ. ಆದರೆ ಪಾಲನೆ ಮಾಡುವದು ತುಂಬಾ ಕಷ್ಟವಾಗಿದ್ದು ಬೊಳೆಗಾಂವ 70 ಜನರನ್ನು ವ್ಯಸನ ಮುಕ್ತ ಮಾಡಿರುವದು ಸ್ವಾಗತಾರ್ಹ, ಇನ್ನಷ್ಟು ಪ್ರಯತ್ನಿಸಿ ಬೊಳೆಗಾಂವ ವ್ಯಸನ ಮುಕ್ತ ಮಾಡಲು ಪ್ರಯತ್ನಿಸಲಾಗುವದು ಎಂದರು. ಝಳಕಿಯ ಉಪನ್ಯಾಸಕಿ ರವಿ ಅರಳಿ,ಧರ್ಮಸ್ಥಳ ಕ್ಷೇಮಾಭಿವೃದ್ದಿ ಸಂಸ್ಥೆಯ ಜಿಲ್ಲಾ ನಿರ್ದೇಶಕ ಸಂತೋಷಕುಮಾರ ರೈ,ಯೋಜನಾಧಿಕಾರಿ ನಟರಾಜ ಎಲ್.ಎಂ,ಪದ್ಮಾ ಮಾತನಾಡಿದರು.

ವೇದಿಕೆಯ ಮೇಲೆ ಜಿಲ್ಲಾ ಜನ ಜಾಗೃತಿ ವೇದಿಕೆ ಉಪಾಧ್ಯಕ್ಷ ರುದ್ರಪ್ಪಾ ಪೂಜಾರಿ, ಅಬಕಾರಿ ಇಲಾಖೆಯ ಪರೀನಾ ವಣಕ್ಯಾಳ, ರಾಹುಲ್ ನಾಯಕ,ವಾದಿರಾಜ, ತಾ.ಪಂ ಸಂಜಯ ಖಡಗೇಕರ, ಪ್ರಾದೇಶಿಕ ಯೋಜನಾಧಿಕಾರಿ ರಾಜೇಶ, ರೂಗಿ ಗ್ರಾ.ಪಂ ಪಿಡಿಒ ಬಸವರಾಜ ಬಬಲಾದ, ಶಶಿಕಲಾ ಬೇಟಗೇರಿ, ಸರಸ್ವತಿ, ಶಿಬಿರಾಧಿಕಾರಿ ದಿವಾಕರ ಪೂಜಾರಿ, ಆರೋಗ್ಯ ಸಹಾಯಕಿ ಜಯಲಕ್ಷ್ಮಿ, ಪರಶುರಾಮ ಹೊಸಮನಿ, ಯೋಗ ಶಿಕ್ಷಕ ಬಿ.ಎಸ್.ಪಾಟೀಲ, ಗ್ರಾ.ಪಂ ಸದಸ್ಯ ಉಮೇಶ ಮತ್ತಿತರಿದ್ದರು.

## ಪ್ರತಿಫಲಾಪೇಕ್ಷೆಯಿಲ್ಲದ ಕೆಲಸಕ್ಕೆ ಸಿಗುವ ತೃಪ್ತಿ ದೊಡ್ಡದು :ಬೆಳಗಲ್ಲ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಸಧ್ಯದ ಪರಿಸ್ಥಿತಿಯಲ್ಲಿ ನಾವೆಲ್ಲರೂ ಪ್ರಶಸ್ತಿ, ಹೆಸರು, ಕೀರ್ತಿ ಪಡೆಯಲು ವಶೀಲಿ, ಪ್ರಭಾವ ಬೀರುವಂತಹ ಹರ ಸಾಹಸ ಮಾಡಲು ಮುಂದಾಗುತ್ತೇವೆ. ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೇ ಕೆಲಸ ಮಾಡಿದರೆ ಸಿಗುವ ತೃಪ್ತಿ ದೊಡ್ಡದು ಎಂದು ತಾಲ್ಲೂಕು ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಎಂ.ಎಂ.ಬೆಳಗಲ್ಲ ಹೇಳಿದರು. ಪಟ್ಟಣದ ಹುಡ್ಕೋ ಬಡಾವಣೆಯ ಹಸಿರು ತೋರಣ ಉದ್ಯಾನವನದಲ್ಲಿ ಹುಬ್ಬಳ್ಳಿಯ ಪ್ರತಿಷ್ಠಿತ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರಾಗಿ ನೇಮಕಗೊಂಡ ಅಶೋಕ ರೇವಡಿ ಹಾಗೂ ಬಿದರಕುಂದಿ ಎನ್.ಎಲ್.ನಾಯ್ಕೋಡಿ ಪ್ರತಿಷ್ಠಾನ ಕೊಡಮಾಡಿದ "ಗುರುಶ್ರೇಷ್ಠ" ಪ್ರಶಸ್ತಿ ಪಡೆದ ಬಿ.ಎಚ್.ಬಳಬಟ್ಟಿ ಅವರುಗಳನ್ನು ಸನ್ಮಾನಿಸಿ ಗೌರವಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಹುಬ್ಬಳ್ಳಿಯ ವಾಣಿಜ್ಯೋದ್ಯಮ ಸಂಸ್ಥೆಯ ಸದಸ್ಯತ್ವ ಪಡೆಯುವುದು ಗೌರವದ ಸಂಗತಿಯಾಗಿದೆ. ಅದರಲ್ಲೂ ಆಡಳಿತ ಮಂಡಳಿಯ ಸದಸ್ಯರಾಗಿ ನೇಮಕಗೊಳ್ಳುವುದು ಇನ್ನೂ ಹೆಚ್ಚಿನ ಗೌರವದ ಸಂಗತಿ. ವ್ಯಾಪಾರ, ವಾಣಿಜ್ಯ, ಸಮಾಜ ಸೇವೆಯನ್ನು ಗುರುತಿಸಿ ಈ ನೇಮಕ ಮಾಡಲಾಗುತ್ತದೆ. ಇದೇ ರೀತಿ ಬಿದರಕುಂದಿ ನಾಯ್ಕೋಡಿ ಪ್ರತಿಷ್ಠಾನ ಸಹ ಅತ್ಯಂತ ಯೋಗ್ಯರಾದ ನಿವೃತ್ತ ಶಿಕ್ಷಕರನ್ನು ಗುರುತಿಸಿ ಗೌರವಿಸುತ್ತದೆ. ಪ್ರಶಸ್ತಿಗಳ ಹಿಂದೆ ನಾವು ಹೋಗದೇ, ನಮ್ಮ ಕೆಲಸ ನೋಡಿ ಪ್ರಶಸ್ತಿಗಳು ಬರಬೇಕು. ಹಸಿರು ತೋರಣ ಬಳಗವು ಯಾವುದೇ ಪ್ರತಿಫಲ, ಲಾಭದ ಆಸೆ ಮಾಡದೇ ಪರಿಸರ ಪ್ರೀತಿಯ ಕೆಲಸ ಮಾಡುತ್ತಿರುವುದು ಮಾದರಿಯಾಗಿದೆ ಎಮದರು. ಹಸಿರು ತೋರಣ ಬಳಗದ ಮಾಜಿ ಅಧ್ಯಕ್ಷ ರವಿ ಗೂಳಿ ಹಾಗೂ ಬಿ.ಎಸ್.ಮೇಟಿ ಮಾತನಾಡಿ, ಅಶೋಕ ರೇವಡಿ ಹಾಗೂ ಬಿ.ಎಚ್.ಬಳಬಟ್ಟಿ ಅವರ ಸಮಾಜಮುಖಿ ಕೆಲಸಗಳನ್ನು ಗುರುತಿಸಿ ಈ ಸನ್ಮಾನ ನಡೆಯುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಹಸಿರು ತೋರಣ ಗೆಳೆಯರ ಬಳಗದ ಅಧ್ಯಕ್ಷ ಡಾ.ವೀರೇಶ ಇಟಗಿ ಮಾತನಾಡಿ, ಹಸಿರು ತೋರಣ ಗೆಳೆಯರ ಬಳಗದ ಸದಸ್ಯರನ್ನು ವಿವಿಧ ಸಂಘ, ಸಂಸ್ಥೆಗಳು ಗುರುತಿಸಿ ಗೌರವಿಸುತ್ತಿರುವುದು ನಮಗೆಲ್ಲ ಸಂತಸದ ಸಂಗತಿಯಾಗಿದೆ. ಪ್ರಶಸ್ತಿಗಳು ನಮ್ಮ ಜವಾಬ್ದಾರಿ ಹೆಚ್ಚಿಸುತ್ತವೆ. ನಾವು ಸಮಾಜಕ್ಕೆ ಒಳ್ಳೆಯದನ್ನು ನೀಡಬೇಕು ಎಂದರು. ಸನ್ಮಾನ ಸ್ವೀಕರಿಸಿ ಅಶೋಕ ರೇವಡಿ ಹಾಗೂ ಬಿ.ಎಚ್.ಬಳಬಟ್ಟಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯತ ಮಾಜಿ ಸದಸ್ಯ ಶ್ರೀಶೈಲ ಮರೋಳ, ಹಸಿರು ತೋರಣ ಗೆಳೆಯರ ಬಳಗದ ಮಾಜಿ ಅಧ್ಯಕ್ಷ ಕೆ.ಆರ್.ಕಾಮಟೆ, ನಾಗಭೂಷಣ ನಾವದಗಿ, ಬಿ.ಎಸ್.ಮೇಟಿ, ರವಿ ಗೂಳಿ, ರಾಜಶೇಖರ ಕಲ್ಯಾಣಮಠ, ಸದಸ್ಯರಾದ ಮಲ್ಲಿಕಾರ್ಜುನ ಬಾಗೇವಾಡಿ, ಸುರೇಶ ಕಲಾಲ, ವೆಂಕನಗೌಡ ಪಾಟೀಲ, ಅಮರೇಶ ಗೂಳಿ, ಕಿರಣ ಕಡಿ, ಬಸವರಾಜ ಸಿದರಡ್ಡಿ, ರವಿ ತಡಸದ, ಬಿ.ಎಂ.ಪಲ್ಲೇದ, ವೀರೇಶ ಹಂಪನಗೌಡ್ರ, ವಿಲಾಸರಾವ್ ದೇಶಪಾಂಡೆ, ಶರಣು ಹಿರೇಕುರುಬರ, ಡಾ.ವಿಜಯಕುಮಾರ ಗೂಳಿ, ಡಾ.ಚಂದ್ರಶೇಖರ ಶಿವಯೋಗಿಮಠ, ಅಮರೇಶ ಐಹೊಳೆ, ಸೋಮಶೇಖರ ಚೀರಲದಿನ್ನಿ, ಜಿ.ಎಂ.ಹುಲಗಣ್ಣಿ, ಪಿ.ಆರ್.ಕೂಡಗಿ, ಶಿವನಗೌಡ ಪಾಟೀಲ, ಪುಟ್ಟು ಕಡಕೋಳ, ವೀರೇಶ ಢವಳಗಿ, ವಿನಯಕುಮಾರ ಹಿರೇಮಠ, ಚಿದಾನಂದ ಗುಬಚಿ, ವಿನಯ ಗಡೇದ ಇದ್ದರು. ಶಿಕ್ಷಕರಾದ ಎಲ್.ಎಂ.ಚಲವಾದಿ ಸ್ವಾಗತಿಸಿದರು. ಸಂಚಾಲಕ ಮಹಾಬಲೇಶ್ವರ ಗಡೇದ ಪ್ರಾಸ್ತಾವಿಕವಾಗಿ ಮಾತನಾಡಿ, ನಿರೂಪಿಸಿದರು. ಬಳಗದ ಮಾಜಿ ಅಧ್ಯಕ್ಷ ನಾಗಭೂಷಣ ನಾವದಗಿ ವಂದಿಸಿದರು.

### ಪ್ರವಾಹ ತಡೆಗೆ ಪ್ರಾಥಮಿಕ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಕ್ರೀಯಾಯೋಜನೆ ಸಿದ್ಧಪಡಿಸಲು ಡಿಸಿ ಸೂಚನೆ

## ಡೋಣಿ ನದಿ ಪ್ರವಾಹ ತಡೆಗೆ ಅಗತ್ಯ ಕ್ರಮ :ಡಿಸಿ ಟಿ.ಭೂಬಾಲನ್

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ಡೋಣಿ ನದಿಯಿಂದ ಉಂಟಾಗುವ ಪ್ರವಾಹ ಪರಿಸ್ಥಿತಿಯನ್ನು ತಡೆಯಲು ತಾತ್ಕಾಲಿಕವಾಗಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಸೂಕ್ತ ಕ್ರೀಯಾಯೋಜನೆಯನ್ನು ಸಿದ್ಧಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದರು. ವಿಜಯಪುರ ಜಿಲ್ಲೆಯಲ್ಲಿ ಪ್ರವಾಹ ಪರಿಸ್ಥಿತಿ ನಿಯಂತ್ರಣ ಕುರಿತು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಪ್ರವಾಹ ನಿಯಂತ್ರಣ ಯೋಜನೆ ರೂಪಿಸುವ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ಸಂಜೆ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು. ಡೋಣಿ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ಸೇತುವೆಗಳಲ್ಲಿ ಹೂಳು ತುಂಬಿಕೊಂಡು ಸೇತುವೆಯ ಎತ್ತರ ಕಡಿಮೆಯಾಗಿ ನೀರಿನ ಶೇಖರಣೆ ಸಾಧ್ಯವಾಗದೇ ಇರುವುದರಿಂದ ನದಿಯಲ್ಲಿ ಹರಿಯುವ ನೀರಿನ ಒತ್ತಡ ಹೆಚ್ಚಾಗಿ ನೀರು ತನ್ನ ಪಥ ಬದಲಿಸಿ ಸುತ್ತಮುತ್ತಲಿನ ಜಮೀನುಗಳಿಗೆ ನೀರು ನುಗ್ಗಿ ಪ್ರವಾಹ ಪರಿಸ್ಥಿತಿ ಉಂಟಾಗಲಿರುವುದರಿಂದ ಡೋಣಿಗೆ ಸೇರುವ ಕಾಲುವೆಗಳನ್ನು ಪರಿಶೀಲನೆ ಹಾಗೂ ಡೋಣಿ ವ್ಯಾಪ್ತಿಯ ವಿವಿಧೆಡೆ ಚೆಕ್ ಡ್ಯಾಂ ನಿರ್ಮಾಣಕ್ಕೆ ಇರುವ ಅವಕಾಶ ಮತ್ತು ಡೋಣಿ ನದಿಯಿಂದ ಬೇರೆ ಕಾಲುವೆ, ಕೆರೆ-ಕಟ್ಟೆಗಳಿಗೆ ನೀರನ್ನು ಹರಿಸುವ ಸಾಧ್ಯಸಾಧ್ಯತೆ ಕುರಿತು ಪರಿಶೀಲನೆ ನಡೆಸಬೇಕು. ಡೋಣಿ ನದಿಯಲ್ಲಿ ತುಂಬಿರುವ ಹೂಳಿ ಪ್ರಮಾಣದ ಕುರಿತು ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ಕೆಬಿಜೆಎನ್ಎಲ್ ಹಾಗೂ ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು. ಡೋಣಿ ನದಿಯಲ್ಲಿ ಹೂಳು ತುಂಬಿ, ಜಾಲಿ ಕಂಟಿಗಳು ಬೆಳೆದು ನೀರು ಸರಾಗವಾಗಿ ಹರಿಯದೇ ಒಂದೇ ಕಡೆ ನೀರು ಜಮಾವಣೆಯಾಗಿ, ಪ್ರವಾಹ ಪರಿಸ್ಥಿತಿ ಉಂಟಾಗುವ ಕುರಿತು ರೈತರಿಗೆ ಸೂಕ್ತ ತಿಳುವಳಿಕೆ ಮೂಡಿಸಬೇಕು. ಹರನಾಳ, ಸಾರವಾಡ, ಎನ್.ಎಚ್.218 ಹೊನಗನಹಳ್ಳಿ, ಹಿಟ್ನಳ್ಳಿ ಡೋಣಿ ನದಿಗೆ ಅಡ್ಡಲಾಗಿ ಕಟ್ಟಿರುವ ಬ್ರಿಜ್‌ಗಳ ಪ್ರದೇಶದಲ್ಲಿ ಸರ್ವೇ ಕಾರ್ಯ ಕೈಗೊಳ್ಳಬೇಕು. ಸರ್ವೇ ಕಾರ್ಯ ಪೂರ್ಣಗೊಳಿಸಿದ ನಂತರ ಅವಶ್ಯಕತೆ ಇದ್ದಲ್ಲಿ ಈ ಪ್ರದೇಶದಲ್ಲಿ ಪ್ರಾಯೋಗಿಕವಾಗಿ 150 ಮೀ. ಹೂಳು ತೆಗೆಯುವುದು, ಜಾಲಿ ಕಂಟಿಗಳನ್ನು ತೆರವುಗೊಳಿಸುವ ಕುರಿತಂತೆ ತಗಲುವ ವೆಚ್ಚ ಸೇರಿದಂತೆ ಮುಂಚಿತವಾಗಿಯೇ ಸೂಕ್ತ ಕ್ರೀಯಾಯೋಜನೆ ಸಿದ್ಧಪಡಿಸಿ ಸಲ್ಲಿಸಬೇಕು. ಯಾವುದೇ ಸಮಸ್ಯೆ ಎದುರಾದರೂ ಕೈಗೊಳ್ಳಬಹುದಾದ ಪರಿಹಾರ ಕುರಿತು ಮುಂಚಿತವಾಗಿಯೇ ಸಿದ್ಧತೆ ಮಾಡಿಟ್ಟುಕೊಳ್ಳುವಂತೆ ಅವರು ಸೂಚನೆ ನೀಡಿದರು. ಪ್ರವಾಹ ಪರಿಸ್ಥಿತಿ ನಿಯಂತ್ರಣಕ್ಕಾಗಿ ವಿವಿಧ ಇಲಾಖೆಗ ಳನ್ನೊಳಗೊಂಡ ಸಮಿತಿಯೊಂದನ್ನು ರಚಿಸಿಕೊಂಡು ಸಮಿತಿಯ ಸಲಹೆ ಮೇರೆಗೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ನರೇಗಾ ಯೋಜನೆಯಡಿ ಹರನಾಳ, ಸಾರವಾಡ, ಎನ್.ಎಚ್.218 ಹೊನಗನಹಳ್ಳಿ, ಹಿಟ್ನಳ್ಳಿ ಡೋಣಿ ನದಿಯ ಹೂಳು ತೆಗೆಯುವ ಸಾಧ್ಯಸಾಧ್ಯತೆ ಕುರಿತು ಪರಿಶೀಲನೆ ನಡೆಸಬೇಕು. ತೆಗೆದ ಹೂಳು ಕೃಷಿ ಬಳಕೆಗೆ ಯೋಗ್ಯವೇ ಎಂಬುದನ್ನು ಕೃಷಿ ಅಧಿಕಾರಿಗಳು ಪರಿಶೀಲನೆ ನಡೆಸಿ ಸೂಕ್ತ ಸಲಹೆ ಒದಗಿಸಬೇಕು. ನೀರು ಹರಿಯುವ ಪ್ರಮಾಣ ಕಡಿಮೆ ಇರುವ ಸಂದರ್ಭದಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಮುಂಚಿತವಾಗಿಯೇ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸೂಕ್ತ ಕ್ರೀಯಾಯೋಜನೆ ಸಿದ್ಧಪಡಿಸಿಟ್ಟುಕೊಳ್ಳುವಂತೆ ಅವರು ಸೂಚನೆ ನೀಡಿದರು. ಜಿಲ್ಲೆಯಲ್ಲಿನ ಡೋಣಿನದಿ ಪ್ರವಾಹ ತಡೆ ಕುರಿತು ಸುರ್ದೀರ್ಘ ಎರಡು ಗಂಟೆಗಳ ಕಾಲ ರೈತರು, ಜಲಬಿರಾದಾರಿ ಸಂಘಟನೆಯವರು, ವಿವಿಧ ಅಧಿಕಾರಿಗಳೊಂದಿಗೆ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಚರ್ಚಿಸಲಾಯಿತು. ಡೋಣಿ ನದಿಯಲ್ಲಿ ಪ್ರವಾಹ ಉಂಟಾಗುವ ವಿವಿಧ ಕಾರಣಗಳ ಕುರಿತು ಕೆಬಿಜೆಎನ್ಎಲ್ ಉಪಮುಖ್ಯ ಅಭಿಯಂತರ ಸುಧೀರ ಸಜ್ಜನ ಅವರು ಪಿಪಿಟಿ ಮೂಲಕ ಸಮಗ್ರ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೋನಾವಣೆ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಕೆಬಿಜೆಎನ್ಎಲ್ ನಾರಾಯಣಪುರ ಅಧೀಕ್ಷಕ ಅಭಿಯಂತರ ಮಂಜುನಾಥ, ಇಂಡಿ ಉಪವಿಭಾಗಾಧಿಕಾರಿ ಆಬೀದ ಗದ್ಯಾಳ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಎಲ್.ರೂಪಾ, ಗ್ರಾಮೀಣ ಕುಡಿಯುವ ನೀರು ಸರಬರಾಜು ಹಾಗೂ ನೈರ್ಮಲ್ಯ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರ ಬಸವರಾಜ ಕುಂಬಾರ, ಪಿಆರ್‌ಇಡಿ ಕಾರ್ಯನಿರ್ವಾಹಕ ಅಭಿಯಂತರ ನಬಿಲಾಲ ಗಬಸಾವಳಗಿ, ಭೂಮಾಪನ ಇಲಾಖೆ ಉಪನಿರ್ದೇಶಕ ಮಹಾಂತೇಶ ಮುಳಗುಂದ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

# ಶಿಸ್ತುಬದ್ಧ ಅಧ್ಯಯನ, ನಿರಂತರ ಪ್ರಯತ್ನದಿಂದ ಉನ್ನತ ಸಾಧನೆ ಸಾಧ್ಯ



ಕಲಬುರಗಿ: ವಿದ್ಯಾರ್ಥಿಗಳು ನಿಗದಿತ ಗುರಿಯನ್ನಿಟ್ಟುಕೊಂಡು ಅದಕ್ಕೆ ಪೂರಕವಾಗಿ ಶಿಸ್ತು, ಸಮಯ ಪ್ರಜ್ಞೆ, ದೃಢ ಸಂಕಲ್ಪ, ನಿರಂತರ ಅಧ್ಯಯನ, ಧನಾತ್ಮಕ ಚಿಂತನೆಯೊಂದಿಗೆ ನಿರಂತರವಾಗಿ ಪ್ರಯತ್ನಿಸಿದರೆ, ನೀವು ಜೀವನದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಜಿಲಾನಾಬಾದ ಸರ್ಕಾರಿ ಪಿಯು ಕಾಲೇಜಿನ ಉಪನ್ಯಾಸಕ, ಚಿಂತಕ ರಮೇಶ ಮಾಡ್ಯಾಳಕರ್ ಹೇಳಿದರು. ನಗರದ ಹೊಸ ಜೇವರ್ಗಿ ರಸ್ತೆಯಲ್ಲಿರುವ 'ಗಂಗೋತ್ರಿ ಸಮಾಜ–ಕಾರ್ಯ ಸ್ನಾತಕೋತ್ತರ ಕಾಲೇಜ್'ನಲ್ಲಿ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಭಾನುವಾರ ಏರ್ಪಡಿಸಲಾಗಿದ್ದ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜೇವರ್ಗಿ ಸರ್ಕಾರಿ ಪಿಯು ಕಾಲೇಜಿನ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ನಿರತಂತವಾದ ಪ್ರಯತ್ನ ಅಗತ್ಯವಾಗಿದೆ. ನಿಗದಿತ ಗು–ರಿಯನ್ನಿಟ್ಟುಕೊಂಡು ಶ್ರಮವಹಿಸಬೇಕು. ಧೈರ್ಯ, ಆತ್ಮವಿಶ್ವಾಸ, ಧನಾತ್ಮಕ ಚಿಂತನೆ, ಸಮಾಜಮುಖಿ ಕಾರ್ಯ, ಸಾಮಾಜಿ–ಕ ಜವಾಬ್ದಾರಿ, ವೈಚಾರಿಕ ಪ್ರಜ್ಞೆ, ಮಾನವಿಯ ಮೌಲ್ಯಗಳನ್ನು ಯಾವ ವ್ಯಕ್ತಿ ಜೀವನದಲ್ಲಿ ದೃಢ ಸಂಕಲ ಮತ್ತು ನಿರಂತರ ಪ್ರಯತ್ನ ಮಾಡುತ್ತಾನೆಯೋ, ಆತ ಜೀವನದಲ್ಲಿ ಅಂದುಕೊಂಡಿದ್ದು ಸಾಧಿಸಲು ಸಾಧ್ಯ. ಅಸಾಧ್ಯ ಎಂಬುದು ಇಲ್ಲವೇ ಇಲ್ಲ. ಪ್ರಯತ್ನದಿಂದ ಎಲ್ಲವೂ ಸಾಧ್ಯ ಎಂದು ದೃಷ್ಟಾಂತಗಳೊಂದಿಗೆ ವಿವರಿಸಿದರು. ರಾಜ್ಯ ಸಂಪನ್ಮೂಲ ಶಿಕ್ಷಕ ಪರಮೇಶ್ವರ ಪರಮೇಶ್ವರ ವಗ್ದರ್ಗಿ ವಿಶೇಷ ಉಪನ್ಯಾಸ ನೀಡಿದರು. ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಕಾಲೇಜಿನ ಅಧ್ಯಕ್ಷ ರಮೇಶ ಬಿರಾದಾರ, ಪ್ರಾಂಶುಪಾಲ ಗೋಪಾಲ ಕುಲಕರ್ಣಿ, ಉಪನ್ಯಾಸಕರಾದ ವೈಷ್ಣವಿ ಕುಲಕರ್ಣಿ, ಸಿದ್ದಮ್ಮ ಹರಳಯ್ಯ, ಪ್ರ.ದ.ಸ ಅರವಿಂದ ಪಾಂಚಾಳ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿದ್ಯಾರ್ಥಿಗಳಾದ ಸ್ನೇಹಾ ಪ್ರಾರ್ಥಿಸಿದರು. ಪ್ರಕಾಶ ಸ್ವಾಗತಿಸಿದರು. ಶಶಿಕಲಾ ನಿರೂಪಿಸಿದರು. ಕಿರಣಕುಮಾರ ವಂದಿಸಿದರು. ನಂತರ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಕನ್ನಡಜ್ಯೋತಿ ರಥಯಾತ್ರೆ ಅಕ್ಟೋಬರ್ 10 ಮತ್ತು 11 ರಂದು ಜಿಲ್ಲೆಗೆ



ಕಲಬುರಗಿ: ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡಜ್ಯೋತಿ ರಥಯಾತ್ರೆ ರಾಜ್ಯದಾದ್ಯಂತ ಸಂಚರಿಸುತ್ತಿದ್ದು, ಅದು ಕಲಬುರಗಿ ಜಿಲ್ಲೆಗೆ ಅಕ್ಟೋಬರ್ 10 ಮತ್ತು 11 ರಂದು ಬರುತ್ತಿರುವುದರಿಂದ ಎಲ್ಲರೂ ಸೇರಿ ಬಹು ವಿಜೃಂಭಣೆಯಿಂದ ಸ್ವಾಗತಿಸೋಣ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಹೇಳಿದರು. ಜಿಲ್ಲೆಗೆ ಆಗಮಿಸುತ್ತಿರುವ ಕನ್ನಡ ಜ್ಯೋತಿ ರಥಯಾತ್ರೆಯ ನಿಮಿತ್ತ ನಗರದ ಕನ್ನಡ ಭವನದಲ್ಲಿ ರವಿವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ತೇಗಲತಿಪ್ಪಿ ಯವರು, ಕನ್ನಡಿಗರಲ್ಲಿ ಕನ್ನಡಾಭಿಮಾನದ ಜತೆಗೆ ಕನ್ನಡತನವನ್ನು ಬೆಳೆಸುವ ಉದ್ದೇಶದಿಂದ ಈ ಕನ್ನಡ ಜ್ಯೋತಿ ರಥ ಯಾತ್ರೆ ನಡೆಯುತ್ತಿದೆ. ಕನ್ನಡ ನಾಡು ನುಡಿ ಭಾಷೆಗೆ ತನ್ನದೇಯಾದ ಶ್ರೀಮಂತಿಕೆ ಇದ್ದು, ಕನ್ನಡಿಗರೆಲ್ಲರೂ ಒಗ್ಗಟ್ಟಿನಿಂದ ಕನ್ನಡ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಲು ಹಾಗೂ ಬೆಳೆಸಿಕೊಂಡು ಹೋಗಲು ಶ್ರಮಿಸಬೇಕು ಎಂದು ಹೇಳಿದರು.ಜಿಲ್ಲಾ ಕಸಾಪ ದ ಗೌರವ ಕಾರ್ಯದರ್ಶಿಗಳಾದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ದೇಶಪಾಂಡೆ, ಸುರೇಸ ಲೇಂಗಟಿ, ಶಿವಶರಣ ಬಡದಾಳ, ವೀರೇಂದ್ರಕುಮಾರ ಕೊಲ್ಲೂರ, ಮಧೂಸೂಧನ ಚಿಂತನಪಳ್ಳಿ, ರೇವಣಸಿದ್ದಪ್ಪ ಜೀವಣಗಿ, ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಇಂಡಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಮಾಸಿಕ ಸಭೆ
# ವಿಶೇಷ ಚೇತನರ ಪುನಶ್ಚೇತನ ಕಾರ್ಯಕ್ರಮ ಯಶಸ್ವಿಗೊಳಿಸಿ :ಕಾಳೆ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ವಿಶೇಷಚೇತನರು ತಮ್ಮಿಂದಾಗುವ ಕೆಲಸವನ್ನು ಆಯ್ಕೆ ಮಾಡಿಕೊಂಡು ಅದನ್ನು ಮಾಡುವ ಮೂಲಕ ಸ್ವಾವಲಂಬನೆಯ ಬದುಕು ನಡೆಸಬೇಕು. ಪುನರ್ವಸತಿ ಕಾರ್ಯಕರ್ತರು ವಿಶೇಷ ಚೇತನರ ಪುನಶ್ಚೇತನ ಕಾರ್ಯಕ್ರಮ ಯಶಸ್ವಿಗೊಳಿಸಲು ಪ್ರಾಮಾಣಿಕ ಸೇವೆ ಸಲ್ಲಿಸಬೇಕು ಎಂದು ಜಿಲ್ಲಾ ವಿಶೇಷ ಚೇತನ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಹೇಳಿದರು. ಇಂಡಿ ತಾಲೂಕಾ ಪಂಚಾಯತ ಸಭಾಂಗಣದಲ್ಲಿ ನಡೆದ ಚಡಚಣ ಹಾಗೂ ಇಂಡಿ ತಾಲೂಕಾ 'ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಮಾಸಿಕ ಸಭೆ'ಯ ಅಧ್ಯಕ್ಷತೆ ವಹಿಸಿ ಮತನಾಡಿದ ಅವರು, ವಿಶೇಷ ಚೇತನರು ಕೀಳರಿಮೆ ತೊರೆದು ಸ್ವಾವಲಂಭನೆ ಬದುಕು ನಡೆಸಬೇಕು. ಮಾರ್ಗದರ್ಶಿ ಕಾರ್ಯಕ್ರಮಗಳ ಸದ್ಬಳಕೆ ಮೂಲಕ ಆತ್ಮವಿಶ್ವಾಸ ಹೆಚ್ಚಿಸಿಕೊಂಡು ಸರ್ಕಾರಗಳ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. ತನಗಿಂತ ಹೆಚ್ಚು ನ್ಯೂನತೆ ಉಳ್ಳವರಿಗೆ ಸಹಾಯ ಮಾಡುವ ಮನಸ್ಸುಳ್ಳವರಾಗಬೇಕು ಎಂದರು. ಈ ವೇಳೆಯಲ್ಲಿ ಇಂಡಿ ತಾಲೂಕಾ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾದ ಪರಶುರಾಮ ಬೋಸಲೆ, ಚಡಚಣ ತಾಲೂಕಾ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾದ ಚಂದ್ರಕಾಂತ ಸೂರ್ಯಗಾಂವ ಚಡಚಣ ಹಾಗೂ ಇಂಡಿ ತಾಲೂಕಾ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಭಾಗವಹಿಸಿದ್ದರು.

# ವಿಶ್ವ ಪ್ರವಾಸೋದ್ಯಮ ದಿನಾಚರಣೆ ಹಿನ್ನೆಲೆ:ಸೈಕ್ಲೋಥಾನ್ ಗೆ ಡಿ.ಸಿ. ಚಾಲನೆ



ಕಲಬುರಗಿ: ವಿಶ್ವ ಪ್ರವಾಸೋದ್ಯಮ ದಿನಾಚರಣೆ ನಿಮಿತ್ಯ ರವಿವಾರ ಕಲಬುರಗಿ ನಗರದ ಐವಾನ್ –ಎ–ಶಾಹಿ–ಅತಿಥಿಗೃಹದಿಂದ ಐತಿಹಾಸಿಕ ಕಲಬುರಗಿ ಕೋಟೆ ವರೆಗೆ ನಡೆದ ಸೈಕ್ಲೋಥಾನ್ ಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಚಾಲನೆ ನೀಡಿದರು. ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಯುನೈಟೆಡ್ ಆಸ್ಪತ್ರೆ, ಕಲಬುರಗಿ ಸೈಕ್ಲಿಂಗ್ ಕ್ಲಬ್ ಹಾಗೂ ಇನಟ್ಯಾಕ್ ಕಲಬುರಗಿ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಸೈಕ್ಲೋಥಾನ್ ಗೆ ಚಾಲನೆ ನೀಡಲು ಡಿ.ಸಿ. ಬಿ.ಫೌ–ಜಿಯಾ ತರನ್ನುಮ್ ಜಗತ್ ವೃತ್ತದಲ್ಲಿನ ತಮ್ಮ ಮನೆಯಿಂದ ಸೈಕಲ್ ಏರಿಯೆ ಅತಿಥಿಗೃಹಕ್ಕೆ ಬಂದರು. ನಂತರ ಇಲ್ಲಿ ಹಸಿರು ನಿಶಾನೆ ತೋರಿ ಸೈಕ್ಲಿಸ್ಟ್ ಜೊತೆಗೆ ಸೈಕಲ್ ಸವಾರಿ ಮೂಲಕ ಕೋಟೆ ವರೆಗೆ ಸಾಗಿದರು. ಐವಾನ್–ಎ–ಶಾಹಿ ಅತಿಥಿಗೃಹದಿಂದ ಕೋಟೆ ವರೆಗಿದ ಸಾಗಿದ ಸೈಕಲ್ ರ‍್ಯಾಲಿನಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಪುಟಾಣಿ ಮಕ್ಕಳು, ಯುವಕರು, ಸೈಕ್ಲಿಸ್ಟ್ ಗಳು ಉತ್ಸಹಾದಿಂದ ಭಾಗಿಯಾಗಿ ಪ್ರವಾಸಿ ಮತ್ತು ಐತಿಹಾಸಿಕ ತಾಣಗಳ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಿದರು. ಕೋಟೆಗೆ ಪ್ರವೇಶಿಸಿದ ಶಾಲಾ–ಕಾಲೇಜು ಮಕ್ಕಳಿಗೆ ಡಾ.ಶಂಭುಲಿಂಗ ವಾಣಿ ಅವರು ಬಹಮನಿ ಕೋಟೆಯ ಇತಿಹಾಸ ಕುರಿತು ವಿವರಿಸಿದರು.ಜಿಲ್ಲಾಧಿಕಾರಿಗೆ ಡಿ.ಸಿ.ಪಿ ಬಿಂದುರಾಣಿ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಮೀನಾಕ್ಷಿ ಆರ್ಯ, ಕಲಬುರಗಿ ತಹಶೀಲ್ದಾರ ಆನಂದಶೀಲ, ಕಲಬುರಗಿ ಸೈಕ್ಲಿಂಗ್ ಅಸೋಸಿಯೇಷನ್ ಕಿರಣ ಶೀತಕರ್ ಸಾತ್ ನೀಡಿದರು. ಸ್ವಚ್ಛತೆಯೆ ಪ್ರವಾಸಿ ಆಕರ್ಷಣೆ: ಸ್ವಚ್ಛತಾ ಹೀ ಸೇವಾ–2024ರ ಅಂಗವಾಗಿ ಸ್ವಭಾವ್ ಸ್ವಚ್ಛತಾ–ಸಂಸ್ಕಾರ ಸ್ವಚ್ಚತಾ ಸಂದೇಶದಡಿಯಲ್ಲಿ ಕಲಬುರಗಿಯ ಐತಿಹಾಸಿಕ ಬಹಮನಿ ಕೋಟೆಯೊಳಗೆ ನಡೆದ ಶ್ರಮದಾನ ಕಾರ್ಯದಲ್ಲಿ ಭಾಗವಹಿಸಿದ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸಭಿಕರನ್ನುದ್ದೇಶಿಸಿ ಮಾತನಾಡಿ, ಪ್ರವಾಸಿ ಮತ್ತು ಐತಿಹಾಸಿಕ ಸ್ಥಳವನ್ನು ಸ್ವಚ್ಛತೆಯಿಂದ ಸಂರಕ್ಷಣೆ ಮಾಡಿದಲ್ಲಿ ಪ್ರವಾಸಿಗರನ್ನು ಆಕರ್ಷಿಸಬಹುದಾಗಿದೆ. ಪ್ರವಾಸಿಗರ ಆಗಮನದಿಂದ ಸ್ಥಳೀಯವಾಗಿ ಆರ್ಥಿಕ ಚಟುವಟಿಕೆ ಗರಿಗೆದರುತ್ತವೆ. ಸ್ವಚ್ಚತೆಯೆ ಪ್ರವಾಸಿ ಆಕರ್ಷಣೆ ಎಂಬುದನ್ನು ಯಾರು ಮರೆಯಬಾರದು ಎಂದರು. ಕೋಟೆಯೊಳಗೆ ನಡೆದ ಶ್ರಮದಾನದಲ್ಲಿ ಜಿಲ್ಲಾಧಿಕಾರಿ ಆದಿಯಾಗಿ ಅಧಿಕಾರಿ–ಸಿಬ್ಬಂದಿಗಳು, ಶಾಲಾ–ಕಾಲೇಜು ಮಕ್ಕಳು, ಕೈಯಲ್ಲಿ ಸಲಕಿ, ಪೊರಕೆ ಹಿಡಿದು ಹುಲ್ಲು, ಗಿಡಗಂಟಿಗಳನ್ನು ಕಿತ್ತರು. ಅಲಲ್ಲಿ ಬಿದ್ದ ಕಸಗಳು ಆಯ್ದರು.

# ಜೂಜಾಟ: ಎರಡು ಪ್ರತ್ಯೇಕ ಪ್ರಕರಣ ದಾಖಲು

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಸಾರ್ವಜನಿಕ ಸ್ಥಳದಲ್ಲಿ ಓಸಿ ಮಟಕಾ ಜೂಜಾಟವಾಡುತ್ತಿದ್ದ ಇಬ್ಬರ ಮೇಲೆ ಇಲ್ಲಿನ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಪಟ್ಟಣದ ಆಶ್ರಯ ಕಾಲೋನಿಯ ಅಬ್ದುಲ ರಹೆಮಾನ ಮನಿಯಾರ ಮತ್ತು ಮಾರುತಿ ನಗರದ ಚಂದ್ರಾಮಪ್ಪ ಧನಗೊಂಡ ಇವರು ಸಾರ್ವಜನಿಕ ಸ್ಥಳದಲ್ಲಿ ನಿಂತು 1ರೂಪಾಯಿಗೆ 80 ರೂಪಾಯಿ ಕೊಡುವ ಕರಾರಿನ ಮೇಲೆ ಓಸಿ ಮಟಕಾ ಜೂಜಾಟದ ಸಂಖ್ಯೆಯನ್ನು ಬರೆದುಕೊಳ್ಳುವಾಗ ಪೊಲೀಸರ ಕೈಗೆ ಸಿಕ್ಕಿದ್ದು ಆರೋಪಿತರಿಂದ ಪೆನ್ನು, ಹಣ ಮತ್ತು ಓಸಿ ಚೀಟಿಯನ್ನು ಜಪ್ತುಪಡಿಸಿಕೊಳ್ಳಲಾಗಿದೆ.

ಈ ಬಗ್ಗೆ ಪಿಎಸ್ಐ ಸಂಜಯ ತಿಪರೆಡ್ಡಿ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣಗಳು ದಾಖಲಾಗಿವೆ.

# ಸುಖಕರ ದಾಂಪತ್ಯ ಜೀವನಕ್ಕೆ ನಾಂದಿ ಹಾಡಲು ಸಲಹೆಗಳು

■ ಉದಯರಶ್ಮಿ ದಿನಪತ್ರಿಕೆ

'ವೀಣಾಂತರಂಗ'

ದಾಂಪತ್ಯ ಎಂಬುದು ಒಂದು ಗಂಡು ಮತ್ತು ಹೆಣ್ಣು ಸಮಾಜಸಮ್ಮತವಾದ ರೀತಿಯಲ್ಲಿ ವಿವಾಹವಾಗಿ ಕಷ್ಟ ಸುಖಗಳನ್ನು ಹಂಚಿಕೊಂಡು, ಪ್ರೀತಿ ಮತ್ತು ಸೌಹಾರ್ದಯುತ ಬಾಳ್ವೆಯನ್ನು ಮಾಡಿ ಈ ಸಮಾಜಕ್ಕೆ ಒಳ್ಳೆಯ ಮಕ್ಕಳನ್ನು ಕೊಡುಗೆಯಾಗಿ ನೀಡುವ ಕ್ರಿಯೆ. ದಾಂಪತ್ಯದಲ್ಲಿ ಗಂಡು–ಹೆಣ್ಣು

ಸರಿಸಮಾನರು, ಒಬ್ಬರಿಗೊಬ್ಬರು ಪೂರಕವಾಗಿ ಇರಬೇಕು ಎಂಬುದು ಸರ್ವ ಸಮ್ಮತವಾಗಿದ್ದರೂ ಅನಾದಿಕಾಲದಿಂದಲೂ ಪುರುಷ ಪ್ರಧಾನ ವ್ಯವಸ್ಥೆಯಲ್ಲಿ ಹೆಣ್ಣುಮಕ್ಕಳು ನಲುಗುವುದೇ ಹೆಚ್ಚು. ಇತ್ತೀಚಿಗಿನ ದಿನಗಳಲ್ಲಿ ಗಂಡ ಮತ್ತು ಹೆಂಡತಿಯ ನಡುವೆ ಕ್ಷುಲ್ಲಕ ಕಾರಣಗಳಿಗಾಗಿ ಜಗಳ, ಕಿರಿಕಿರಿಗಳು ಹೆಚ್ಚಾಗಿದ್ದು ಸುಖಕರ ದಾಂಪತ್ಯ ಎಂಬುದು ಕನಸಿನ ಮಾತಾಗಿದೆ.

ಪತಿ–ಪತ್ನಿಯರಿಬ್ಬರೂ ತುಸು ಪ್ರಯತ್ನ ಪಟ್ಟರೆ ಸುಖಕರ ದಾಂಪತ್ಯ ಜೀವನಕ್ಕೆ ನಾಂದಿ ಹಾಡಲು ಕೆಲ ಸಲಹೆಗಳು.

* ಅದೆಷ್ಟೇ ಕೋಪ ತಾಪಗಳಿದ್ದರೂ ಒಬ್ಬರನ್ನೊಬ್ಬರು ಪ್ರೀತಿಸಿ, ಅವರ ಎಲ್ಲ ಒಳ್ಳೆಯತನದ ಜೊತೆಗೆ ಅರೆಕೊರೆಗಳನ್ನು ಕೂಡ ಪ್ರೀತಿಸಿ. ಪ್ರೀತಿ ಎನ್ನುವುದು ಕೇವಲ ಭಾವನಾತ್ಮಕ ಬಂಧವಲ್ಲ, ಅದೊಂದು ಬದ್ಧತೆ.

* ಸಂಗಾತಿಯ ಫೋನ್ ಕರೆಗೆ ಕಡ್ಡಾಯವಾಗಿ ಉತ್ತರಿಸಿ ಮತ್ತು ಸಂಗಾತಿಯೊಂದಿಗೆ ಇರುವಾಗ ಮೊಬೈಲ್ ಫೋನನ್ನು ದೂರವಿಡಿ.





*ಕಡ್ಡಾಯವಾಗಿ ದಿನದ ಕೆಲ ಸಮಯವಾದರೂ ಸಂಗಾತಿಯ ಜೊತೆಗೆ ಇರುವುದನ್ನು ರೂಢಿಸಿಕೊಳ್ಳಿ. ಸಮಯ ಎನ್ನುವುದು ಸಂಬಂಧಗಳನ್ನು ಉಳಿಸಿಕೊಳ್ಳುವ ನಾಣ್ಯವಿದ್ದಂತೆ. ಆದ್ದರಿಂದ ವೈವಾಹಿಕ ಸಂಬಂಧದಲ್ಲಿ ನಿಮ್ಮ ಸಮಯವನ್ನು ಹೂಡಿಕೆ ಮಾಡಿ.

* ನಿಮ್ಮ ವೈವಾಹಿಕ ಬಂಧವನ್ನು ಗಟ್ಟಿಗೊಳಿಸುವ ಸ್ನೇಹಿತರು ನಿಮ್ಮೊಂದಿಗೆ ಇರಲಿ ಮತ್ತು ನಿಮ್ಮ ಸಂಗಾತಿಯ ಕುರಿತು ದೂರನ್ನು ಕೇಳುವ ಜನರಿಂದ ದೂರವಿರಿ ಮತ್ತು ಎಂದಿಗೂ ಅಂತಹ ಜನರೊಂದಿಗೆ ರಾಜಿಯಾಗದಿರಿ.

* ಸದಾ ನಗುನಗುತ್ತಾ ನಿಮ್ಮ ಸಂಬಂಧಕ್ಕೆ ತಾಜಾ ಮತ್ತು ಸುಖಕರ ಅನುಭೂತಿಯನ್ನು ನೀಡಿ. ಎಂತದ್ದೇ ಕಷ್ಟದ ಸಮಯದಲ್ಲಿಯೂ ಕೂಡ ಸಂತಸದ ಬೆಳ್ಳಿ ರೇಖೆ ಮಿನುಗುತ್ತಿರಲಿ. ಖುಷಿಯನ್ನು ಹಂಚಿಕೊಳ್ಳಲು ಕಾರಣವೇ ಬೇಕಿಲ್ಲ ಎಂಬುದನ್ನು ಮನಗಾಣಿರಿ.

* ಸಂಗಾತಿಯೊಂದಿಗಿನ ವಾದದಲ್ಲಿ ಸೋಲು ಇಲ್ಲವೇ ಗೆಲುವು ಎಂಬುದು ಇರುವುದಿಲ್ಲ... ಸಾಂಗತ್ಯ ಎಂಬುದೇ ಜೊತೆಗಾರಿಕೆ ಅಲ್ಲವೇ? ಗೆದ್ದರೂ ಸೋತರೂ ಪರಿಣಾಮವನ್ನು ಅನುಭವಿಸುವವರು ನೀವೇ ಆದ್ದರಿಂದ ಒಬ್ಬರಿಗೊಬ್ಬರು ಸೋತು ಜೀವನದಲ್ಲಿ ಗೆಲ್ಲಬೇಕು ಎಂಬುದನ್ನು ಮರೆಯದಿರಿ.

* ಒಂದು ಗಟ್ಟಿಯಾದ ವಿವಾಹ ಬಂಧದಲ್ಲಿ ಅತ್ಯಂತ ವಿರಳವಾಗಿ ಪತಿ–ಪತ್ನಿಯರಿಬ್ಬರೂ ಏಕಕಾಲದಲ್ಲಿ ಸಶಕ್ತರಾಗಿರುತ್ತಾರೆ. ಬದುಕಿನಲ್ಲಿ ಯಾರೇ ಎದೆಗುಂದಿದರೂ ಪರಸ್ಪರ ಒಬ್ಬರಿಗೊಬ್ಬರು ಬಲವನ್ನು, ಧೈರ್ಯವನ್ನು ತುಂಬುತ್ತಾ ಪರಸ್ಪರ ಪೂರಕವಾಗಿ ಒಬ್ಬರಿನ್ನೊಬ್ಬರಿಗೆ ಆಸರೆಯಾಗಿ ಸಾಗಬೇಕು.

* ತನು ಮನಗಳ ಮಿಲನವು ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ, ವಿವಾಹ ಎಂಬುದು ದೈಹಿಕ ಸಂಬಂಧವನ್ನು ಮೀರಿದ ಬಂಧ ನಿಜ, ಆದರೆ ಅದರಿಂದ ಹೊರತಾದ ಸಂಬಂಧವೂ ನೀರಸವಾಗಿರುತ್ತದೆ ಎಂಬುದನ್ನು ಅರಿಯಬೇಕು.

* ಮದುವೆ ಎನ್ನುವುದು ಎನ್ನುವುದು ಪತಿ–ಪತ್ನಿಯರ ಶೇಕಡ 50ರ ಪಾಲುದಾರಿಕೆಯಲ್ಲ.. ಸುಖಕರ ದಾಂಪತ್ಯಕ್ಕೆ ನೀವು ನಿಮ್ಮ ಶೇಕಡ 100 ನ್ನು ಅರ್ಪಿಸಲೇಬೇಕು. ಎಲ್ಲವನ್ನೂ ಸಮನಾಗಿ ಹಂಚಿಕೊಳ್ಳುವುದು ದಾಂಪತ್ಯವಲ್ಲ ನಿಮ್ಮ ಶೇಕಡ ನೂರರಷ್ಟು ಗಮನವನ್ನು, ಪ್ರೀತಿ, ವಿಶ್ವಾಸ ನಂಬಿಕೆಯನ್ನು ನೀವು ಅವರಿಗೆ ಅರ್ಪಿಸಲೇಬೇಕು.

* ನಿಮ್ಮಲ್ಲಿರುವ ಅತ್ಯುತ್ತಮವಾದ ಸಂಗತಿಗಳನ್ನು ನಿಮ್ಮ ಸಂಗಾತಿಗೆ ಕೊಡಿ. ಎಲ್ಲರಿಗೂ ಹಂಚಿ ಅಳಿದು ಉಳಿದದ್ದನ್ನಲ್ಲ.

* ಬೇರೆಯವರು ಮಾಡುವ ತಪ್ಪುಗಳನ್ನು ನೋಡಿ ಕಲಿಯಿರಿ, ಆದರೆ ನಿಮ್ಮ ದಾಂಪತ್ಯವನ್ನು ಬೇರೆಯವರ ದಾಂಪತ್ಯಕ್ಕೆ ಹೋಲಿಸುವುದು ಖಂಡಿತವಾಗಿಯೂ ಬೇಡ.

* ಮಕ್ಕಳಾಗುವವರೆಗೆ ಸಂಗಾತಿಯ ಕೈ ಹಿಡಿದು ನಲಿದಾಡುವ ನೀವು ಮಕ್ಕಳಾದ ಮೇಲೆ ಕೂಡ ನಿಮ್ಮ ಸಂಗಾತಿಯೊಂದಿಗೆ ಒಡನಾಟವನ್ನು ಹಾಗೆಯೇ ಮುಂದುವರಿಸಿ... ಜೀವಕ್ಕೆ ಕೊನೆಗಾಲದಲ್ಲಿ ಮತ್ತೆ ನೀವು ಒಬ್ಬರಿಗೊಬ್ಬರೇ ಆಗುವುದು ಎಂಬ ಸತ್ಯವನ್ನು ಮರೆಯದಿರಿ.

* ದಾಂಪತ್ಯದಲ್ಲಿ ಎಂದೂ ರಹಸ್ಯಗಳು ಬೇಡ, ಪಾರದರ್ಶಕತೆಯೇ ನಿಮ್ಮ ಒಳ್ಳೆಯ ದಾಂಪತ್ಯದ ಗುಟ್ಟಾಗಿರಲಿ. ದಾಂಪತ್ಯದಲ್ಲಿ ಸುಳ್ಳು ಸಲ್ಲದು.. ನಂಬಿಕೆಯೇ ದಾಂಪತ್ಯದ ಸುಭದ್ರ ಬುನಾದಿ.

* ಸಂಗಾತಿಗಳಲ್ಲಿ ತಪ್ಪು ಯಾರಿಂದಲೇ ಘಟಿಸಲಿ... ಅದನ್ನು ಶೀಘ್ರವಾಗಿ ಒಪ್ಪಿಕೊಳ್ಳುವ, ಕ್ಷಮೆ ಕೇಳುವ ಮೂಲಕ ಆ ತಪ್ಪಿನಿಂದಾದ ನೋವನ್ನು ಮರೆಯಲು ಮತ್ತು ನಂಬಿಕೆಯನ್ನು ಗಳಿಸಲು ಅವಕಾಶ ಸಿಗುತ್ತದೆ. ಹಾಗಿದ್ದರೆ ಯಾವುದೇ ಮುಜುಗರ ಹಿಂಜರಿಕೆಗಳಿಲ್ಲದೆ ಅವರನ್ನು ಕ್ಷಮಿಸಿ... ಮತ್ತೆ ಮತ್ತೆ ಆ ತಪ್ಪನ್ನು ನೆನಪಿಸುವ ತೊಂದರೆ ತೆಗೆದುಕೊಳ್ಳಬೇಡಿ. ಆ ತಪ್ಪು ಕಲಿಸಿದ ಪಾಠವನ್ನು ಕಲಿತು ಮುಂದೆ ಸಾಗಿ.





* ನಿಮ್ಮ ಸಂಗಾತಿಯೊಂದಿಗೆ ತಾಳ್ಮೆಯಿಂದ ವರ್ತಿಸಿ... ನಿಮ್ಮ ದಿನಚರಿಗಿಂತ ಸಂಗಾತಿ ಹೆಚ್ಚು ಮುಖ್ಯ.. ಸಿಟ್ಟು ಮಾಡಿಕೊಳ್ಳುವ ಮುನ್ನ ಕ್ಷಣ ಯೋಚಿಸಿ.

* ಒಳ್ಳೆಯ ಪತ್ನಿಯಾಗಲು ನಿಮ್ಮ ಮಗಳಿಗೆ ಮತ್ತು ಒಳ್ಳೆಯ ಪತಿಯಾಗಲು ನಿಮ್ಮ ಮಗನಿಗೆ ನೀವೇ ಮಾದರಿಯಾಗಿ.

* ನಿಮ್ಮ ಸಂಗಾತಿಯ ಕುರಿತು ಕೆಟ್ಟದಾಗಿ ಯಾರಲ್ಲಿಯೂ ಹೇಳಿಕೊಳ್ಳಬೇಡಿ... ಎಲ್ಲಾ ಸಮಯ ಮತ್ತು ಸಂದರ್ಭಗಳು ಇಂತಹ ಮಾತುಕತೆಗೆ ಅನುಕೂಲಕರವಾಗಿರುವುದಿಲ್ಲ

* ನಿಮ್ಮ ಸಂಗಾತಿಯ ಬಂಧು ಬಾಂಧವರೊಂದಿಗೆ ಯಾವುದೇ ಪೂರ್ವಾಗ್ರಹವಿಲ್ಲದೆ ಒಳ್ಳೆಯ ಸಂಬಂಧವನ್ನು ನಿರ್ವಹಿಸಿ.

* ದಂಪತಿಗಳಿಬ್ಬರ ಮನಸ್ಥಿತಿಗೆ ಹೊಂದುವಂತಹ ಒಳ್ಳೆಯ ಸ್ನೇಹ ವಲಯವನ್ನು ಹೊಂದಿರುವುದು, ಅವರೊಂದಿಗೆ ಆಗಾಗ ಪಿಕ್ನಿಕ್, ಪ್ರವಾಸಗಳಿಗೆ ಹೋಗುವ ಮೂಲಕ ಸಂಗಾತಿಗೆ ಸಮಯ ನೀಡಿ.

* ಕುಟುಂಬದೊಂದಿಗೆ ಪೂಜೆ, ಪ್ರಾರ್ಥನೆ, ಧರ್ಮ ಕ್ಷೇತ್ರಗಳ ಭೇಟಿಗಳನ್ನು ಎಂದೂ ತಪ್ಪಿಸದಿರಿ.

* ಸಂಗಾತಿಗಳ ನಡುವಿನ ಅರ್ಥಪೂರ್ಣ ಮೌನ ಸಂಬಂಧ ಸುಧಾರಣೆಗೆ ಅತ್ಯಂತ ಉತ್ತಮ

* ವಿಚ್ಛೇದನದ ಕುರಿತು ಎಂದಿಗೂ ಯೋಚಿಸಬೇಡಿ. ಈ ಜಗತ್ತಿನಲ್ಲಿ ಯಾರೂ ಪರಿಪೂರ್ಣರಲ್ಲ.ಇಬ್ಬರು ಅಪರಿಪೂರ್ಣ ವ್ಯಕ್ತಿಗಳು ಒಂದಾಗಿ ಪರಿಪೂರ್ಣತೆಯತ್ತ ಸಾಗುವುದೇ ದಾಂಪತ್ಯ. ಜೀವಿತದ ಕೊನೆಯವರೆಗೂ ಸುಧಾರಣೆ ಸಾಧ್ಯ. ಅಂತಿಮವಾಗಿ ಮದುವೆ ಎನ್ನುವುದು ಜೀವನದ ಅತ್ಯವಶ್ಯಕ ಸಂಸ್ಕಾರ, ನನ್ನದು ಎಂಬ ಕೌಟುಂಬಿಕ ಬಂಧನ ಕೊಡುವ ಆತ್ಮೀಯತೆಗಿಂತ ಮಿಗಿಲಾದದ್ದು, ವೈವಾಹಿಕ ಬಂಧನ ಕೊಡುವ ಸುಮಧುರ ಅನುಭವಕ್ಕೆ ಮತ್ತಾವುದೂ ಸಾಟಿಯಲ್ಲ. ನನಗಾಗಿ ಮಿಡಿಯುವ ಜೀವಗಳು ನನ್ನೊಂದಿಗಿವೆ ಎಂಬ ಧೈರ್ಯ, ವಿಶ್ವಾಸಗಳು ವ್ಯಕ್ತಿಯನ್ನು ಗಟ್ಟಿಯಾಗಿಸುತ್ತವೆ. "ಅಪರಿಪೂರ್ಣತೆಯಿಂದ ಪರಿಪೂರ್ಣತೆಯತ್ತ ಸಾಗುವ ದಾಂಪತ್ಯದ ಪಯಣ" ದಲ್ಲಿ ಎಲ್ಲ ಏರಿಳಿತಗಳನ್ನು ಸವಾ ಲುಗಳನ್ನು ಜೊತೆ ಯಾಗಿ ಎದುರಿಸಿ ಮುಂದೆ ಸಾಗ ಲೇಬೇಕು... ಅದುವೇ ಯಶಸ್ವಿ ದಾಂಪತ್ಯ. ಏನಂತೀರಾ ಸ್ನೇಹಿ ತರೆ?



ಲೇಖಕ

■ - ವೀಣಾ ಹೇಮಂತ್ ಗೌಡ ಪಾಟೀಲ್

ಮುಂಡರಗಿ – ಗದಗ್

# 'ಬ್ಯಾಗಲೆಸ್ ಡೇ' ಪ್ರಯೋಜನ ಪಡೆದ ನವೋದಯ ವಿದ್ಯಾರ್ಥಿಗಳು

■ ಉದಯರಶ್ಮಿ ದಿನಪತ್ರಿಕೆ




ನಿಡಗುಂದಿ: ಆಲಮಟ್ಟಿ ಡ್ಯಾಂ ಸೈಟ್ ಜವಾಹರ ನವೋದಯ ವಿದ್ಯಾಲಯದ ವತಿಯಿಂದ ವಿದ್ಯಾರ್ಥಿಗಳಿಗೆ ಸೋಮವಾರ ಆಲಮಟ್ಟಿ ರೈಲ್ವೆ ನಿಲ್ದಾಣದಲ್ಲಿ ಬ್ಯಾಗ್ ರಹಿತ ದಿನ' ಆಚರಿಸಲಾಯಿತು. ಈ ವೇಳೆ ವಿದ್ಯಾಲಯದ ಶಿಕ್ಷಕರು ವಿದ್ಯಾರ್ಥಿಗಳಿಗೆ ರೈಲ್ವೆ ನಿಲ್ದಾಣದಲ್ಲಿ ನಡೆಯುವ ಚಟುವಟಿಕೆಗಳು, ರೈಲ್ವೇ ಸಿಬ್ಬಂದಿಯ ಕಾರ್ಯವೈಖರಿ ಹಾಗೂ ರೈಲ್ವೆ ಪ್ರಯಾಣದಲ್ಲಿ ಅನುಸರಿಸಬೇಕಾದ ನಿಯಮಗಳು ಮತ್ತು ಸೌಲಭ್ಯಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಈ ವೇಳೆ 'ಉದಯರಶ್ಮಿ' ಪತ್ರಿಕೆಯೊಂದಿಗೆ ಮಾತನಾಡಿದ ನವೋದಯ ವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ಡಿ.ಪಿ. ತಯಡೆ ಮಾತನಾಡಿ, ಕಳೆದ 2020 ರಿಂದ ವಾರಕ್ಕೊಮ್ಮೆ ವಿದ್ಯಾರ್ಥಿಗಳಿಗೆ 'ಬ್ಯಾಗಲೆಸ್ ಡೇ' ಅನುಕೂಲ ಕಲ್ಪಿಸಿದ್ದು, ಈ ದಿನ ತರಗತಿವಾರು ವಿದ್ಯಾರ್ಥಿಗಳನ್ನು ಸರಕಾರಿ ಕಚೇ–ರಿಗಳಿಗೆ ಕರೆದುಕೊಂಡು ಹೋಗಿ ಆಯಾ ಇಲಾಖೆಯ ಸಮಗ್ರ ಪರಿಚಯ ಮಾಡಿಕೊಡಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರಕಾರದ ಆಯಾ ಇಲಾಖೆಗಳ ಕಾರ್ಯವ್ಯಾಪ್ತಿ ಹಾಗೂ ಸೌಲಭ್ಯಗಳ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದು ವಿವರಿಸಿದರು. ಈ ಕಾರ್ಯದಲ್ಲಿ ವಿದ್ಯಾಲಯದ ಶಿಕ್ಷಕರಾದ ಉತ್ಕರ್ಷ ತ್ರಿಪಾಠಿ, ಎಮ್.ತಿಪ್ಪೇಸ್ವಾಮಿ, ಮೀನು ರಾವತ್, ಉಷಾ ಕಲಾಲರ ಮತ್ತು ವಿಜಯ ಕುಮಾರ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ರೈಲು ನಿಲ್ದಾಣದ ಸಮಗ್ರ ದರ್ಶನ ಮಾಡಿಸಿದರು.

# ಸಚಿವ ಎಂ.ಬಿ.ಪಾಟೀಲರಿಂದ ಶಿಕ್ಷಣಕ್ಕೆ ಹೆಚ್ಚಿನ ಒತ್ತು :ದೇಸಾಯಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಚಿವ ಎಂ.ಬಿ.ಪಾಟೀಲ ಅವರು ಶಾಲೆಗಳು ಮತ್ತು ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯ ಒದಗಿಸುವ ಮೂಲಕ ಗ್ರಾಮೀಣ ಭಾಗದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ ಎಂದು ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಕುಮಾರ ಚ. ದೇಸಾಯಿ ಹೇಳಿದ್ದಾರೆ.ಸೋಮವಾರ ಬಬಲೇಶ್ವರ ತಾಲೂಕಿನ ಜೈನಾಪುರ ಗ್ರಾಮದಲ್ಲಿ ಎಂ. ಬಿ. ಪಾಟೀಲ ಫೌಂಡೇಶನ್ ವತಿಯಿಂದ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರ ಜನ್ಮದಿನದ ಅಂಗವಾಗಿ ಸರಕಾರಿ ಗಂಡು ಮಕ್ಕಳ ಹಿರಿಯ ಪ್ರಾಥ–'ಮಿಕ ಶಾಲೆಯಲ್ಲಿ ಐದು ಮತ್ತು ಆರನೇ ತರಗತಿಯ ವಿದ್ಯಾರ್ಥಿಗಳಿಗೆ ಸ್ಕೂಲ್ ಬ್ಯಾಗ್ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸಚಿವರು ಜನಪರ ಕಾರ್ಯಕ್ರಮಗಳ ಮೂಲಕ ಈ ಭಾಗದಲ್ಲಿ ಹೆಚ್ಚೆಚ್ಚು ಅಭಿವೃದ್ಧಿ ಕೆಲಸ ಮಾಡುತ್ತಿದ್ದಾರೆ. ಈ ಮೂಲಕ ಸರ್ವಜನರ ಏಳಿಗೆಗೆ ಶ್ರಮಿಸುತ್ತಿದ್ದಾರೆ ಎಂದು ಹೇಳಿದರು. ಸಚಿವರ ಆಪ್ತ ಸಹಾಯಕ ದಶರಥ ಭೋಸ್ಲೆ ಮಾತನಾಡಿ, ಜಲಸಂಪನ್ಮೂಲ ಸಚಿವರಾಗಿ ನೀರಾವರಿ ಕ್ರಾಂತಿ ಮಾಡಿರುವ ಎಂ. ಬಿ. ಪಾಟೀಲರು, ಈಗ ಕೈಗಾರಿಕೆ ಸಚಿವರಾಗಿ ಕೈಗಾರಿಕೆ ಕ್ರಾಂತಿ ಮಾಡುತ್ತಿದ್ದಾರೆ. ಅಲ್ಲದೇ, ಸಿಎರ್ ಫಂಡ್ ಮೂಲಕ ಜಿಲ್ಲೆಯಲ್ಲಿ ಶಿಕ್ಷಣಕ್ಕೆ ಅನುದಾನ ಒದಗಿಸಿ ಶೈಕ್ಷಣಿಕ ಕ್ರಾಂತಿಗೆ ಕಾರಣರಾಗಿದ್ದಾರೆ. ಇಂದು ಸಾಂಕೇತಿ–ಕವಾಗಿ ಜೈನಾಪುರ ಗ್ರಾಮದಲ್ಲಿ ಸ್ಕೂಲ್ ಬ್ಯಾಗ್ ವಿತರಿಸಲಾಗಿದ್ದು, ಮತಕ್ಷೇತ್ರಾದ್ಯಂತ ಆದಷ್ಟು ಶೀಘ್ರದಲ್ಲಿ ಸ್ಕೂಲ್ ಬ್ಯಾಗ್ ವಿತ–ರಿಸಲಾಗುವುದು ಎಂದು ಹೇಳಿದರು.

ಶಿಕ್ಷಣ ಸಂಯೋಜ–ಕ ಪ್ರಭು ಬಿರಾದಾರ ಮಾತನಾಡಿ, ಸಚಿವರ ಮುತುವರ್ಜಿಯಿಂದಾಗಿ ಗ್ರಾಮೀಣ ವಿದ್ಯಾರ್ಥಿಗಳಿಗೆ ಉತ್ತಮ ಸೌಲಭ್ಯಗಳು ಸಿಗುತ್ತಿವೆ. ಇದರಿಂದ ಬಡ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಉತ್ತಮ ಸೇವೆ ಮಾಡಲು ಅನುಕೂಲವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸ್ಕೂಲ್ ಬ್ಯಾಗ್ ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಗ್ರಾ. ಪಂ. ಅಧ್ಯಕ್ಷ ಸಂಗಮೇಶ ಬೀಳಗಿ, ಮುಖಂಡರಾದ ಜಗನ್ನಾಥ ಹಿರೇದೇಸಾಯಿ, ಪ್ರಶಾಂತ ದೇಸಾಯಿ, ಹಣಮಂತ ಚೋಳಾಪ್ಪಗೋಳ, ಶ್ರೀಶೈಲ ತುಪ್ಪದ, ಸದಾನಂದ ಮಂಟೂರ, ಗ್ರಾ. ಪಂ. ಮಾಜಿ ಉಪಾಧ್ಯಕ್ಷ ಅಮೀತ ದೇಸಾಯಿ, ಗ್ರಾ. ಪಂ. ಸದಸ್ಯರಾದ ಉತಾಲಸಾಬ ಬೆಳ್ಳಗಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಭರಮಪ್ಪ ಕಲ್ಲವ್ವಗೋಳ, ಶಿಕ್ಷಣ ಸಂಯೋಜಕ ವಸಂತ ಚವ್ಹಾಣ, ದೈಹಿಕ ಶಿಕ್ಷಣಾಧಿಕಾರಿ ಚಂದ್ರಶೇಖರ ಕೋರೆ, ಶಿಕ್ಷಕ ವಿ. ಎಸ್. ನಿಂಗರಡ್ಡಿ, ಎಚ್. ಎಂ. ಚಿತ್ತರಗಿ, ಎ. ಎಸ್. ರೂಪರಾವರ, ಸಂಗಮೇಶ ಕೋಲಕಾರ ಮುಂತಾದವರ ಉಪಸ್ಥಿತರಿದ್ದರು.

# ಎಂ.ಬಿ.ಪಾಟೀಲರ ಜನ್ಮ ದಿನಾಚರಣೆ: ಪೂಜೆ, ಅನ್ನ ಸಂತರ್ಪಣೆ



■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ತಾಲ್ಲೂಕಿನೆಲ್ಲೆಡೆ ಸಚಿವ ಎಂ.ಬಿ.ಪಾಟೀಲರ ಜನ್ಮ ದಿನಾಚರಣೆಯನ್ನು ಅಭಿಮಾನಿಗಳು, ಹಿತೈಷಿಗಳು, ಧುರೀಣರು, ಯುವಕರು ಕೇಕ್ ಕತ್ತರಿಸಿ ಗ್ರಾಮದ ದೇವರುಗಳಿಗೆ ಪೂಜೆ ಸಲ್ಲಿಸಿ ಅನ್ನ ಸಂತರ್ಪಣೆ ನೀಡಿ ಅದ್ದೂ–ರಿಯಾಗಿ ಆಚರಿಸಿದರು.

ತಾಲ್ಲೂಕಿನ ಘೋಣಸಗಿ ಗ್ರಾಮದಲ್ಲಿ ಅಮೋಘಸಿದ್ದೇಶ್ವರ ದೇವಸ್ಥಾನದಲ್ಲಿ ಸಚಿವರ ಹೆಸರಲ್ಲಿ ಯುವಕರೊಂದಿಗೆ ಪೂಜೆ ಸಲ್ಲಿಸಿ ಮಾತನಾಡಿದ ಎಂ.ಬಿ.ಪಾಟೀಲ ಫೌಂಡೇಶನ್ ಕಾರ್ಯದರ್ಶಿ ಯಾಕುಬ ಜತ್ತಿ, ಸಚಿವರು ಮಾಡಿದ ನೀರಾವರಿ ಕ್ರಾಂತಿ, ಶೈಕ್ಷಣಿಕ ಕ್ರಾಂತಿ, ಕೋಟಿ ವೃಕ್ಷ ಅಭಿಯಾನ ನಮ್ಮ ಜೀವಿತಾವಧಿ ಅಷ್ಟೆ ಅಲ್ಲದೇ ಮುಂದಿನ ತಲೆಮಾರಿನ ಪೀಳಿಗೆಗಳಿಗೆ ಅನೂಕೂಲವಾಗಲಿದೆ. ಈಗ ಕೈಗಾರಿಕಾ ಕ್ರಾಂತಿಯ ಮೂಲಕ ಅವರ ಸಾಧನೆಯ ಹಾದಿ ಸಾಗುತ್ತಿದೆ. ಇನ್ನೂ ಹೆಚ್ಚಿನ ಹುದ್ದೆ ಅಲಂಕರಿಸಿ ನಾಡಿನ ಜನರ ಒಳಿತಿಗಾಗಿ ಶ್ರಮಿಸಿ ರಾಜ್ಯವನ್ನು ಅಭಿವೃದ್ಧಿ ಪಥದತ್ತ ಸಾಗಿಸುವ ಸಾಮರ್ಥ್ಯ ದೇವರು ಒದಗಿಸಲಿ ಎಂದು ಶುಭ ಹಾರೈಸಿದರು.

ಈ ಭಾಗದ ರೈತರಿಗೆ ನೀರಾವರಿ ಯೋಜನೆಗಳು ಕನಸಿನ ಮಾತಾಗಿದ್ದವು. ಈ ಭಾಗದತ್ತ ನೀರಾವರಿ ಮಾಡಲು ಸಾಧ್ಯವೇ ಇಲ್ಲ ಎಂಬ ಮಾತುಗಳಿದ್ದವು. ಅದನ್ನೆ ಸವಾಲಾಗಿ ಸ್ವೀಕರಿಸಿ ಅತಿ ಎತ್ತರ ಪ್ರದೇಶ ಮಹಾರಾಷ್ಟ್ರದ ಕೊನೆಯ ಹಳ್ಳಿಯವರೆಗೂ ತುಬಚಿ ಬಬಲೇಶ್ವರ ಏತ ನೀರಾವರಿ ಯೋಜನೆ ಅನುಷ್ಠಾನಗೊಳಿಸಿ ರೈತರ ಪಾಲಿನ ದೇವಾರಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಅಮಸಿದ್ದಗೌಡ ಪಾಟೀಲ್ ಸುರೇಶ ಪವಾರ, ಮೈಬೂಬ್ ಜತ್ತಿ,

ಮೇಲಗಿರಿ, ಹೊಸಮನಿ, ರಮೇಶ್ ಭಜಂತ್ರಿ ರಾಹುಲಖವಿ,

ವಿನಾಯಕ ಜಮಖಂಡಿ, ಟಿಪ್ಪುಸುಲ್ತಾನ್ ಮುಲ್ಲಾ , ಇಮಾಮಸಾಬ ಮುಲ್ಲಾ, ಅಂಬರೀಷ್ ಹಟ್ಟಿ, ರಮೇಶ ದೊಡಮನಿ ಊರಿನ ಹಿರಿಯರು, ಯುವ ಮುಖಂಡರು,ಗ್ರಾಮದ ಜನರು ಇದ್ದರು.

# ರಕ್ತದಲ್ಲಿರುವ ಕೆಟ್ಟ ಕೊಬ್ಬು ಹೊರಹಾಕಲು ರಕ್ತದಾನ ಸಹಕಾರಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಕ್ತದಾನ ಶ್ರೇಷ್ಠದಾನವಾಗಿದ್ದು, ಕಷ್ಟದಲ್ಲಿರುವವ–ರಿಗೆ ಮರುಜೀವ ನೀಡುತ್ತದೆ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಸಹಾಯಕ ಕಾನೂನು ಸಲಹೆಗಾರ ಸೂರ್ಯಕಾಂತ ಬಿರಾದಾರ ಹೇಳಿದ್ದಾರೆ. ಸೋಮವಾರ ನಗರದ ಬಿ.ಎಲ್.ಡಿ.ಇ ಆಸ್ಪತ್ರೆಯ ರಕ್ತ ಭಂಡಾರದಲ್ಲಿ ಶ್ರೀ ಬಿ. ಎಂ. ಪಾಟೀಲ ನರ್ಸಿಂಗ್ ಮಹಾವಿದ್ಯಾಲಯದಲ್ಲಿ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಂಸ್ಥೆಯ ಅಧ್ಯಕ್ಷ ಎಂ. ಬಿ. ಪಾಟೀಲ ಅವರ ಜನ್ಮದಿನದ ಅಂಗವಾಗಿ ಆಯೋಜಿಸಲಾಗಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ರಕ್ತದಾನದಿಂದ ಕೇವಲ ರೋಗಿಗೆ ಮರುಜೀವ ನೀಡುವುದು ಮಾತ್ರವಲ್ಲ, ದಾನಿಯೂ ಆರೋಗ್ಯದಿಂದ ಇರಲು ಸಹಾಯವಾಗುತ್ತದೆ.

ರಕ್ತದಲ್ಲಿರುವ ಕೆಟ್ಟ ಕೊಬ್ಬನ್ನು ಹೊರಗೆ ಹಾಕಲು ಇದು ಸಹಕಾ–ರಿಯಾಗಿದೆ. ಒಬ್ಬ ಆರೋಗ್ಯವಂತ ವ್ಯಕ್ತಿ ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡುವ ಮೂಲಕ ಆರೋಗ್ಯದಿಂದ ಇರಬಹುದಾಗಿದೆ ಎಂದು ಅವರು ಹೇಳಿದರು. ಈ ಶಿಬಿರದಲ್ಲಿ 20 ಜನರು ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಶಾಲ್ಮೋನ್ ಚೋಪಡೆ, ಡಾ. ಪ್ರಕಾಶ ಪಾಟೀಲ, ಸಂತೋಷ ಮಸಳಿ, ಚಂದ್ರಕಾಂತ ಡಾ. ಅಪ್ಪನಗೌಡ ಪಾಟೀಲ, ಡಾ. ಅಮಿತಕುಮಾರ ಬಿರಾದಾರ, ಡಾ. ಸತೀಶ ನಡಗಡ್ಡಿ, ಡಾ. ಸಂಕಪ್ಪ ಗುಲಗಂಜಿ, ಕಿರಣ ಶಿರೋಳಕರ, ನವೀನ ಗಿರಡಿಮಠ, ಶಂಕರ್ ಬಿರಾದಾರ, ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು, ಹಾಗೂ ಕಾಲೇಜು ಸಿಬ್ಬಂದಿ ಉಪಸ್ಥಿತರಿದ್ದರು.

# ನೇಕಾರ ಸಮ್ಮಾನ್: ವಿದ್ಯುತ್ ಮಗ್ಗ ನೇಕಾರರಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2024–25ನೇ ಸಾಲಿಗೆ ನೇಕಾರ ಸಮ್ಮಾನ್ ಯೋಜನೆಯಡಿ ವಿದ್ಯುತ್ ಮಗ್ಗ ನೇಕಾರರಿಗೆ ವಾರ್ಷಿಕ 5,000ರೂಗಳ ಆರ್ಥಿಕ ನೆರವನ್ನು ನೀಡುವ ಸಲುವಾಗಿ ವಿದ್ಯುತ್ ಮಗ್ಗ ಮತ್ತು ಮಗ್ಗಪೂರ್ವ ಘಟಕದ ಮಾಲೀಕರು ಹಾಗೂ ಸದರಿ ಘಟಕಗಳಲ್ಲಿ ಕಾರ್ಯನಿರ್ವಹಿಸುತತಿರುವ ಅರ್ಹ ಕಾರ್ಯನಿರತ ವಿದ್ಯುತ್ ಮಗ್ಗ ನೇಕಾರರನ್ನು ಈಗಾಗಲೇ ಕಳೆದ ಸಾಲಿನಲ್ಲಿ ನೇಕಾರ ಸಮ್ಮಾನ್ (ವಿದ್ಯುತ್ ಮಗ್ಗ) ಯೋಜನೆಯಡಿ ಸೇವಾಸಿಂಧು ಪೋರ್ಟಲ್‌ನಲ್ಲಿ ನೋಂದಾಯಿಸಿದ ವಿದ್ಯುತ್ ಮಗ್ಗ ಮತ್ತು ಮಗ್ಗ ಪೂರ್ವ ಘಟಕಗಳಲ್ಲಿ ಕೆಲಸ ಮಾಡುತ್ತಿರುವ ನೇಕಾರ–ರಿಮದ ಹೊಸದಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿಜಯಪುರ ಜಿಲ್ಲೆಯ ನೇಕಾರರು ನಿಗಧಿತ ಅರ್ಜಿ ನಮೂನೆಯೊಂದಿಗೆ ಘಟಕದ ಮಾಲೀಕರಿಂದ ಮುಚ್ಚಳಿಕೆ ಪತ್ರ, ಘಟಕದ ಮಾಲೀಕರ/ನೇಕಾರರ ಆಧಾರ್ ಲಿಂಕ್ ಬ್ಯಾಂಕ್ ಪಾಸ್‌ಬುಕ್ ಪ್ರತಿ, ವಿದ್ಯುತ್ ಮಗ್ಗ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಫಲಾನುಭವಿಯ ಫೋಟೋ, ವಿದ್ಯುತ್ ಸಂಪರ್ಕ ಹೊಂದಿರುವ ಆರ್.ಆರ್. ಸಂಖ್ಯೆಯ ಇತ್ತೀಚಿನ ವಿದ್ಯುತ್ ಬಿಲ್, ಘಟಕದ ಉದ್ಯೋಗ ಆಧಾರ್/ಪಿ.ಎಂ.ಟಿ ಉದ್ದಿಮೆದಾರರ ಪರವಾನಿಗೆ ಪತ್ರದ ಪ್ರತಿ, ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ನೇಕಾರರ ವಿವರಗಳನ್ನು ಒಳಗೊಂಡ ಮಜೂರಿಯ ಪಾವತಿಯ ಪ್ರತಿಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು 25–10–2024 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕೈ ಮಗ್ಗ ಮತ್ತು ಜವಳಿ ಇಲಾಖೆ, ಕೈಗಾರಿಕೆ ಕೇಂದ್ರ ಆವರಣ ಶಿಖಾರಖಾನ ವಿಜಯಪುರ ಅಥವಾ ಮೊಬೈಲ್ ಸಂಖ್ಯೆ 9902561441ನ್ನು ಸಂಪರ್ಕಿಸಬಹುದು ಎಂದು ಕೈ ಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

# ನಿವೃತ್ತಿ ನಂತರವೂ ಸಮಾಜ ಸೇವೆ ನಿರಂತರವಾಗಿರಲಿ : ಶಾಸಕ ರಾಜುಗೌಡ



■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಹುಟ್ಟು–ಸಾವುಗಳ ಮಧ್ಯೆ ನಾವು ಹೇಗೆ ಜೀವನ ಮಾಡುತ್ತೇವೆ ಎಂಬುವದು ಬಹಳ ಮುಖ್ಯವಾಗಿದೆ. ಜೀವನದಲ್ಲಿ ಉತ್ತಮ ಜೀವನ ಮಾಡಿದರೆ ಸಮಾಜದಲ್ಲಿ ಶಾಶ್ವತವಾಗಿ ಇರಲು ಸಾಧ್ಯ. ಈ ನಿಟ್ಟಿನಲ್ಲಿ ಸಮಾಜಪರ ಕಳಕಳಿ ಹೊಂದಿರುವ ಭೂತಲ–ಪಾಟೀಲ ಉಭಯ ಶಿಕ್ಷಕ ದಂಪತಿಗಳು ತಮ್ಮ ನಿವೃತ್ತ ಜೀವನದ ನಂತರವೂ ಸಾಮಾಜಿಕ ಸೇವೆಯಲ್ಲಿ ತೊಡಗುವಂತಾಗಿ ಅವರ ನಿವೃತ್ತಿ ಜೀವನ ಸುಖಕರವಾಗಲೆಂದು ದೇವರಹಿಪ್ಪರಗಿ ಶಾಸಕ ಭೀಮನಗೌಡ(ರಾಜುಗೌಡ) ಪಾಟೀಲ ಕುದರಿಸಾಲವಾಡಗಿ ಹೇಳಿದರು.

ಪಟ್ಟಣದ ವೀರಭದ್ರೇಶ್ವರ ನಗರದಲ್ಲಿರುವ ಸಿದ್ರಾಮೇಶ್ವರ ನಿವಾಸದ ಮುಂಭಾಗ ಶನಿವಾರ ಹಮ್ಮಿಕೊಂಡಿದ್ದ ಉಮಾದೇವಿ ಭೂತಲ (ಪಾಟೀಲ) ಅವರ ನಿವೃತ್ತಿ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಉಮಾದೇವಿ ಭೂತಲ ಅವರ ಪತಿ ನಿವೃತ್ತ ಶಿಕ್ಷಕ ಎಸ್.ಜಿ.ಪಾಟೀಲ ಅವರು ಸಮಾಜದಲ್ಲಿ ಹೇಗೆ ಬದುಕಬೇಕೆಂಬದನ್ನು ತೋರಿಸಿಕೊಟ್ಟಿದ್ದಾರೆ. ಅವರು ತಮ್ಮ ಪತ್ನಿ ಉಮಾದೇವಿ ಅವರನ್ನು ಸಹ ಸಮಾಜಪರ ಚಟುವಟಿಕೆಯಲ್ಲಿ ಭಾಗವಹಿಸುವಂತೆ ಮಾಡುವ ಮೂಲಕ ಅವರಿಂದ ಸಮಾಜಕ್ಕೆ ಸೇವೆ ಸಲ್ಲಿಸುವಂತೆ ಮಾಡಿದ್ದಾರೆ. ಇರ್ವರು ಶಿಕ್ಷಕ ವೃತ್ತಿಯಲ್ಲಿ ಉತ್ತಮ ಸೇವೆ ಮಾಡುವ ಮೂಲಕ ಮಕ್ಕಳಿಗೆ ಜ್ಞಾನರ್ಜನೆ ಮಾಡಿದ್ದಾರೆ. ಅನೇಕ ಪ್ರಶಸ್ತಿಗಳಿಗೆ ಭಾಜನರಾಗುವ ಮೂಲಕ ಆದರ್ಶ ಶಿಕ್ಷಕರಾಗಿದ್ದಾರೆ. ಇವರ ಸೇವೆ ನಿವೃತ್ತಿಯ ನಂತರವೂ ಸಮಾಜಕ್ಕೆ ಸದಾ ಇರಲೆಂದು ಶುಭ ಹಾರೈಸಿದರು.

ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಸೋಮನಗೌಡ ಪಾಟೀಲ ಮನಗೂಳಿ ಮಾತನಾಡಿ, ನಿವೃತ್ತಿ ಹೊಂದಿರುವದು ಶಿಕ್ಷಕ ವೃತ್ತಿಗೆ ಹೊರತು ಅವರ ಸಾಮಾಜಿಕ ಸೇವೆ ಅಲ್ಲ. ಅವರು ಶೈಕ್ಷಣಿಕ ವೃತ್ತಿಯಲ್ಲಿ ಮಕ್ಕಳಿಗೆ ವಿದ್ಯೆಯನ್ನು ನೀಡುವ ಮೂಲಕ ಅವರ ಭವಿಷ್ಯ ಉತ್ತಮ ಗೊಳಿಸಿದ ಕೀರ್ತಿಗೆ ಈ ದಂಪತಿಗಳು ಭಾಜನರಾಗಿದ್ದಾರೆ ಎಂದರು.

ರಾಜ್ಯ ಹಂಡೇವಜೀರ ಕ್ಷೇಮಾಭಿವೃದ್ಧಿ ರಾಜ್ಯಾಧ್ಯಕ್ಷ ಡಾ.ಎಸ್.ಎಸ್.ಪಾಟೀಲ ಮಾತನಾಡಿ, ಮಕ್ಕಳ ಮನಸ್ಸನ್ನು ಅರ್ಥ ಮಾಡಿಕೊಂಡು ಉನ್ನತ ಭವಿಷ್ಯ ರೂಪಿಸುವ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಸಮಾಜದಲ್ಲಿ ಸದಾ ಗೌರವ ಸ್ಥಾನವಿದೆ. ನೇರ ನುಡಿಗೆ ಇನ್ನೊಂದು ಹೆಸರೇ ಎಸ್.ಜಿ.ಪಾಟೀಲ ಎಂದು ಹೇಳಬಹುದು ಎಂದರು.

ಸಿದ್ದರಾಮೇಶ್ವರ ಸಹಕಾರಿ ಸಂಘದ ಅಧ್ಯಕ್ಷ ಎಸ್.ಜಿ.ಪಾಟೀಲ ಮಾತನಾಡಿ, ಮಕ್ಕಳಲ್ಲಿಯೇ ದೇವರನ್ನು ಕಂಡು ಶಿಕ್ಷಕಿ ಉಮಾದೇವ ಭೂತಲ ಸೇವೆಗೈದವರು. ಬರುವ ದಿನಗಳಲ್ಲಿ ಹಿಂದುಳಿದ ಮಕ್ಕಳಿಗೆ ಆರ್ಥಿಕ ಹಾಗೂ ಆರೋಗ್ಯ ಸೇವೆಗೆ ಮುಂದಾಗುವೆ ಎಂದರು.

ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಜೀವನದಲ್ಲಿ ಹೊಂದಾಣಿಕೆ ಎನ್ನುವದು ಇಲ್ಲದೇ ಇದ್ದರೆ ಜೀವನ ಪರಿಪೂರ್ಣವಾಗಲು ಸಾಧ್ಯವಿಲ್ಲ. ನಮ್ಮ ಜೀವನದಲ್ಲಿ ಅಹಂಕಾರ ಎನ್ನುವದು ಇರಬಾರದು. ಶಿಕ್ಷಕರು ತಮ್ಮ ವೃತ್ತಿಯಲ್ಲಿ ಗುರುವಿನಗಿಂತಲೂ ಗುರುವಾಗಿ ಕಾರ್ಯನಿರ್ವಹಿಸಿದಲ್ಲಿ ಆ ವೃತ್ತಿಗೆ ಗೌರವ ಬರುತ್ತದೆ ಎಂದರು.

ಕರಭಂಟನಾಳ ಹಿರೇಮಠದ ಶಿವಕುಮಾರ ಸ್ವಾಮೀಜಿ ಮಾತನಾಡಿ, ನಮ್ಮ ಬದುಕು ಪರಿಪೂರ್ಣವಾಗಿರಬೇಕು. ನಮಗೆ ಮುಕ್ತಿ ಎನ್ನುವದು ಗುರುವಿನ ಹಸ್ತದಿಂದ ಬರಬೇಕು. ಪಾಟೀಲ ದಂಪತಿಗಳು ಕಷ್ಟದೊಂದಿಗೆ ಜೀವನ ನಡೆಸಿ ಸಮಾಜಕ್ಕೆ ಬಹಳಷ್ಟು ಕೊಡುಗೆ ನೀಡಿದ್ದಾರೆ ಎಂದರು.

ಸಾನಿಧ್ಯ ವಹಿಸಿದ್ದ ಸಿದ್ದಲಿಂಗ ಸ್ವಾಮೀಜಿ, ವೀರರುದ್ರಮುನಿ ಸ್ವಾಮೀಜಿ, ಮುಖಂಡರಾದ ಶಿವನಗೌಡ ಬಿರಾದಾರ, ಬಿ.ಕೆ.ಕಲ್ಲೂರ, ವಿವೇಕಾನಂದ ಕಲ್ಯಾಣಶೆಟ್ಟಿ, ಬಿಇಓ ವಸಂತ ರಾಠೋಡ, ನಿವೃತ್ತಿ ಶಿಕ್ಷಕಿ ಉಮಾದೇವಿ ಭೂತಲ ಮಾತನಾಡಿದರು.

ದ್ರಾಕ್ಷಾಯಿಣಿ ಪಾಟೀಲ ಪ್ರಾರ್ಥಿಸಿದರು. ಎಚ್.ಬಿ.ಬಾರಿಕಾಯಿ ಪ್ರಾಸ್ತವಿಕವಾಗಿ ಮಾತನಾಡಿದರು. ದೇವೇಂದ್ರ ಗೋನಾಳ ಸ್ವಾಗತಿಸಿದರು. ಕೊಟ್ರೇಶ ಹೆಗ್ಡಾಳ ನಿರೂಪಿಸಿದರು. ಶಿವು ಮಡಿಕೇಶ್ವರ ವಂದಿಸಿದರು. ಬಾಲ ಕಲಾವಿದೆ ಅನುಷ್ಕಾ ಭೂತಲ ಭರತನಾಟ್ಯ, ಮುದ್ದೇಬಿಹಾಳದ ಗಾನಯೋಗಿ ಪಂಚಾಕ್ಷರಿ ಗವಾಯಿಗಳ ತಂಡದಿಂದ ಸಂಗೀತ ಕಾರ್ಯಕ್ರಮ ಜರುಗಿತು. ಇದೇ ಸಂದರ್ಭದಲ್ಲಿ ಎಸ್.ಜಿ.ಪಾಟೀಲ ದಂಪತಿಗಳನ್ನು ಅನೇಕರು ಸನ್ಮಾನಿಸಿದರು.

# ಇಂಡಿ ಸಿಪಿಐ ಡಪ್ಪಿನ ರಿಗೆ ಆರು ಚಿನ್ನದ ಪದಕ

■ ಉದಯರಶ್ಮಿ ದಿನಪತ್ರಿಕೆ

**ಇಂಡಿ:** ಉತ್ತರ ವಲಯ ಬೆಳಗಾವಿಯಲ್ಲಿ ಜರುಗಿದ ವಲಯ ಮಟ್ಟದ ಪೋಲಿಸ ಕರ್ತವ್ಯ ಕೂಟದಲ್ಲಿ ಇಂಡಿ ಸಿ.ಪಿ.ಐ ಗ್ರಾಮಾಂತರ ಮಲ್ಲಿಕಾರ್ಜುನ ಡಪ್ಪಿನ ರವರಿಗೆ ಆರು ಚಿನ್ನದ ಪದಕಗಳು ಲಭಿಸಿವೆ.

ಸ್ಪರ್ಧೆಯಲ್ಲಿ ವಿಜಯಪುರ, ಬಾಗಲಕೋಟ, ಧಾರವಾರ ಗದಗ ಮತ್ತು ಬೆಳಗಾವಿ ಜಿಲ್ಲೆ ಪೋಲಿಸ ಅಧಿಕಾರಿಗಳು ಭಾಗವಹಿಸಿದ್ದರು.

ಕಳೆದ ವರ್ಷವೂ ಕೂಡ ಡಪ್ಪಿನ ರವರು ಆರು ಚಿನ್ನದ ಪಡೆದಿದ್ದರು. ಇದು ಎರಡನೆಯ ಬಾರಿ ಅವರಿಗೆ ಆರು ಚಿನ್ನದ ಪದಕ ಪಡೆದಿದ್ದಾರೆ.



ಬೆಳಗಾವಿಯಲ್ಲಿ ನಡೆದ ಅಖಿಲ ಭಾರತ ಪೋಲಿಸ್ ಡ್ಯೂಟಿ ಮೀಟ್ ಪೋಲಿಸರ ಶ್ರೇಷ್ಠತೆಗೆ ವೇಗವರ್ಧಕ, ಮತ್ತು ಪ್ರತಿಷ್ಠಿತ ಸ್ಪರ್ಧೆಯಾಗಿದೆ. ಈ ಸ್ಪರ್ಧೆ ಪೋಲಿಸ ಸಿಬ್ಬಂದಿಯನ್ನು ಒಟ್ಟುಗೂಡಿಸುತ್ತದೆ. ಮತ್ತು ಈ ವಾರ್ಷಿಕ ಕಾರ್ಯಕ್ರಮವು ಅಧಿಕಾರಿಗಳಿಗೆ ತಮ್ಮ ಕೌಶಲ್ಯಗಳನ್ನು ಪ್ರದರ್ಶಿಸಲು ಜ್ಞಾನ ವಿನಿಮಯ ಮತ್ತು ಸೌಹಾರ್ಧತೆ ಯನ್ನು ಬೆಳೆಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಸ್ಪರ್ಧೆ ಕಾರ್ಯಾಚರಣೆ ಹೆಚ್ಚಿಸುವದಲ್ಲದೆ ಭಾರತೀಯ ಪೋಲಿಸ ಪಡೆಯೊಳಗೆಗ ಬಾಂದವ್ಯ ಹೆಚ್ಚಿಸುತ್ತದೆ.

ದೈಹಿಕ ಸಾಮರ್ಥ್ಯ, ಮಾರ್ಕ್ಸಮನ್ ಶೀಫ್,ಅಡೆತಡೆ ಕೋರ್ಸು, ಜ್ಞಾನ ವಿನಿಮಯ,ವೃತ್ತಿಪರ ಅಭಿವೃದ್ಧಿ, ಸ್ಥೈರ್ಯ ವರ್ಧಕ, ಸಾರ್ವಜನಿಕ ಇಮೇಜ ವರ್ಧನೆ, ಮತ್ತು ಯುದ್ದ ತಂತ್ರದ ಕುಶಲತೆ ಸಿಬ್ಬಂದಿ ಅಭಿವೃದ್ಧಿ ಸ್ಪರ್ಧೆಗಳಲ್ಲಿ ಡಪ್ಪಿನ ರವರು ಚಿನ್ನದ ಪದಕ ಪಡೆದಿದ್ದಾರೆ.

ಕಂಪ್ಯೂಟರ್ ಅವೇರನೆಷ್, ಪೋಲಿಸ ಪೋಟೋಗ್ರಾಫಿ, ಪೋಲಿಸ ವಿಡಿಯೋಗ್ರಾಫಿ, ಆಂಟಿ ಸಬ್‌ಟೇಜ್ ಚೆಕ್ಸ,ಸ್ಪೇಷಿಯಲ್ ಕಾನಿನ್ ಯುನಿಟ್ ಕಂಟೆಸ್ಟ, ಆಬ್‌ಜರವೇಷನ್ ಟೆಸ್ಟ ಪರೀಕ್ಷೆಗಳಲ್ಲಿ ಡಪ್ಪಿನ ರವರು ಅತೀ ಹೆಚ್ಚು ಅಂಕ ಪಡೆದು ಚಿನ್ನದ ಪದಕ ಗಳಿಸಿದ್ದಾರೆ.

# ಶಾಸಕ ಅಶೋಕ ಮನಗೂಳಿ ಅವರಿಗೆ ಸನ್ಮಾನ



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ತಾಲೂಕಿನ ಗೋಲಗೇ–ರಿಯ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸ್ಥಾಯಿ ಸಮಿತಿ ಸದಸ್ಯರಾಗಿ ಆಯ್ಕೆಯಾದ ಸಿಂದಗಿ ಮತಕ್ಷೇತ್ರದ ಶಾಸಕ ಅಶೋಕ ಮನಗೂಳಿ ಅವರಿಗೆ ಸನ್ಮಾನಿಸಿ ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಬಸವರಾಜ ಮಾರಲಭಾವಿ, ಯುವ ಮುಖಂಡರಾದ ಮಡಿವಾಳ ನಾಯ್ಕೋಡಿ, ಶಂಕರ ಬೋರಗಿ, ಶರಣಗೌಡ ಬಿರಾದಾರ, ಶ್ರೀಶೈಲ ಹಿಪ್ಪರಗಿ ಬಸವರಾಜ ಜಂಬಗಿ ಶಾಂತಗೌಡ ಬಿರಾದಾರ ಸೇರಿದಂತೆ ಮತ್ತಿತ್ತರು ಇದ್ದರು.

### ಅ.18 ರಂದು ಸಚಿವ ಸಂಪುಟದಲ್ಲಿ ಚರ್ಚಿಸಿದ ನಂತರ ಸೂಕ್ತ ತೀರ್ಮಾನ ಎಂದ ಸಿಎಂ ಸಿದ್ದರಾಮಯ್ಯ

# ಜಾತಿ ಗಣತಿ ವರದಿ ಜಾರಿ ಕುರಿತು ಅ.18 ರಂದು ಚರ್ಚೆ

ಬೆಂಗಳೂರು: ಜಾತಿ ಗಣತಿ ಎಂದು ಜನಪ್ರಿಯವಾಗಿರುವ ಸಾಮಾಜಿಕ–ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿ ಜಾ–ರಿಗೊಳಿಸುವ ಬಗ್ಗೆ ಅ.18 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ.

ಜಾತಿ ಗಣತಿ ವರದಿ ಕುರಿತು ಇಂದು ಹಿಂದುಳಿದ ವರ್ಗಗಳ ಸಚಿವರು ಮತ್ತು ಶಾಸಕರೊಂದಿಗೆ ಸಭೆ ನಡೆಸಿದ ನಂತರ ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಸಂಸದರಿಗೂ ಈ ಸಭೆಗೆ ಆಹ್ವಾನಿಸಲಾಗಿತ್ತು. ಆದರೆ ಯಾರೂ ಬಂದಿಲ್ಲ. ಬಿಜೆಪಿ ಎಂಎಲ್ ಸಿ ಎನ್ ರವಿಕುಮಾರ್ ಸೇರಿದಂತೆ ಸುಮಾರು 30 ಶಾಸಕರು ಸಭೆಯಲ್ಲಿ ಪಾಲ್ಗೊಂಡಿದ್ದರು ಮತ್ತು ಸಾಮಾಜಿಕ ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯನ್ನು ಅಂಗೀಕಾರ ಮಾಡಿ, ಜಾರಿಗೆ ತರಬೇಕೆಂದು ಒತ್ತಾಯಿಸಿ ಮನವಿ ಸಲ್ಲಿಸಿದ್ದಾರೆ ಎಂದರು.



ಇಡೀ ದೇಶದಲ್ಲಿ ಇಂತಹ ಸಮೀಕ್ಷೆ ನಡೆಸಿದ ಪ್ರಥಮ ರಾಜ್ಯ ಕರ್ನಾಟಕ. ಅಕ್ಟೋಬರ್ 18 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿದ ನಂತರ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಿಎಂ ತಿಳಿಸಿದ್ದಾರೆ

ಇದು ಹಿಂದುಳಿದ ವರ್ಗಗಳ ಜಾತಿ ಸಮೀಕ್ಷೆ ಮಾತ್ರ ಅಲ್ಲ ಎಂದು ಸ್ಪಷ್ಟಪಡಿಸಲು ಬಯಸುತ್ತೇನೆ. ಇದು 7 ಕೋಟಿ ಕನ್ನಡಿಗರ ಸಮೀಕ್ಷೆಯಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

2013 – 18ರಲ್ಲಿ ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಎಚ್.ಕಾಂತರಾಜು ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಆಯೋಗದವರು ಸಾಕಷ್ಟು ಸಮಯ ತೆಗೆದುಕೊಂಡು ಸಮೀಕ್ಷೆ ನಡೆಸಿದ್ದಾರೆ. ರಾಜ್ಯದ ಮನೆಮನೆಗೆ ಭೇಟಿ ನೀಡಿ ಸಮೀಕ್ಷೆ ಮಾಡಿರುವುದಾಗಿ ಕಾಂತರಾಜು ಅವರು ತಿಳಿಸಿದ್ದಾರೆ. ನಾನು ಇಲ್ಲಿಯವರೆಗೂ ವರದಿಯನ್ನು ಪರಿಶೀಲಿಸಿಲ್ಲ.

ಹಿಂದೆ ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಕಾಂತರಾಜು ವರದಿ ಪೂರ್ಣಗೊಂಡಿರಲಿಲ್ಲ. ಆದ್ದರಿಂದ ನನ್ನ ಅವಧಿಯಲ್ಲಿ ಜಾತಿ ಗಣತಿ ವರದಿಯನ್ನು ಸ್ವೀಕ–ರಿಸಲು ಮತ್ತು ಜಾರಿಗೊಳಿಸಲು ಸಾಧ್ಯವಾಗಿರಲಿಲ್ಲ. ನಂತರ ಎಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಕಾಂತುರಾಜು ಅವರು ವರದಿಯನ್ನು ಸಲ್ಲಿಸಲು ಸಿದ್ಧತೆ ನಡೆಸಿದ್ದರು. ಆದರೆ ಎಚ್‌ಡಿ ಕುಮಾರಸ್ವಾಮಿ ವರದಿ ಸ್ವೀಕರಿಸಲು ಒಪ್ಪಿರಲಿಲ್ಲ. ನಂತರ ಬಿಜೆಪಿ ಸರ್ಕಾರ ಬಂದರೂ, ವರದಿಯನ್ನು ಸ್ವೀಕರಿಸಲಿಲ್ಲ ಎಂದರು.

**ಹಿಂದುಳಿದ ವರ್ಗಗಳ ಶಾಸಕರ ಮನವಿ**

**ಕಾಂತರಾಜು ಅವರ ಅಧ್ಯಕ್ಷಾವಧಿ ಪೂರ್ಣಗೊಂಡ ನಂತರ ಜಯಪ್ರಕಾಶ್ ಹೆಗ್ಗಡೆಯವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾದರು. ಅವರು ಕೋರಿದಂತೆ ವರದಿ ಸಲ್ಲಿಕೆಗೆ ಮೂರು ತಿಂಗಳ ಅವಕಾಶ ಕೊಡಲಾಗಿತ್ತು. ನಂತರ ಆ ವರದಿಯನ್ನು ಸ್ವೀಕರಿಸಲಾಗಿದೆ. ಸ್ವೀಕರಿಸಿದ ವರದಿಯನ್ನು ಜಾರಿಗೊಳಿಸಲು ಎಲ್ಲರಿಂದಲೂ ಒತ್ತಾಯ ಬಂದಿದೆ. ಈ ಹಿನ್ನಲೆಯಲ್ಲಿ ಸೋಮವಾರ ಹಿಂದುಳಿದ ವರ್ಗಗಳ ಶಾಸಕರು ಸಭೆ ನಡೆಸಿ ವರದಿಯನ್ನು ಜಾರಿಗೊಳಿಸುವಂತೆ ಮನವಿ ಸಲ್ಲಿಸಿದ್ದಾರೆ.**

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR